# ಬೆಳಗಾವಿ ವಾರ್ತೆ

ಕನ್ನಡ ದಿನ ಪತ್ರಿಕೆ, ಬೆಳಗಾವಿ

ಸಂಪಾದಕರು : ಮಹೇಶ್ವರಿ ಭೀಮಶಿ ಭರಮಣ್ಣವರ
EDITOR : MAHESHWARI BHIMASHI BHARAMANNAVARA

BELAGAVI VARTE
KANNADA DAILY MORNING BELAGAVI

G-mail:
belagavivarte1@gmail.com

Volume: 01 Issue : 19 THURSDAY 26-03-2026 PRGI No : KNKAN/26/A0962 Pages:4 Rs.2.00 M: 9742418836

## ರಾಹುಕಾಲದಲ್ಲಿ ಬಜೆಟ್ ಮಂಡಿಸಿದ್ದೇನೆ: ಸಿಎಂ ಸಿದ್ದರಾಮಯ್ಯ



ಬೆಂಗಳೂರು: ನಾನು ರಾಹುಕಾಲ, ಗುಳಿಕಾಲ ಇವನ್ನೆಲ್ಲಾ ನಂಬಲ್ಲ. ಹಿಂದೆಯೆಲ್ಲಾ ರಾಹುಕಾಲದಲ್ಲೇ ಬಜೆಟ್ ಮಂಡಿಸಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಮುಖ್ಯಮಂತ್ರಿ ತಮ್ಮ ಬಜೆಟ್ ಭಾಷಣದಲ್ಲಿ ಕರ್ಮ ಸಿದ್ಧಾಂತದ ಬಗ್ಗೆ ಪ್ರಸ್ತಾಪಿಸಿ, ಇದು ನನ್ನ ಹಣೆಬರಹ, ಪೂರ್ವಜನ್ಮದ ಕರ್ಮ ಎಂದೆಲ್ಲಾ ಮಾತನಾಡುತ್ತಾರೆ.

ಇದರಲ್ಲಿ ನನಗೆ ನಂಬಿಕೆ ಇಲ್ಲ. ಕರ್ಮ ಸಿದ್ಧಾಂತವನ್ನು ನಾನು ನಂಬಲ್ಲ. ಬಸವಣ್ಣನವರು 800 ವರ್ಷಗಳ ಹಿಂದೆಯೇ ಕರ್ಮ ಸಿದ್ಧಾಂತವನ್ನು ತಿರಸ್ಕರಿಸಿದ್ದರು ಎಂದು ಹೇಳಿದಾಗ ಮಧ್ಯೆ ಪ್ರವೇಶಿಸಿ ಮಾತನಾಡಿದ ಪ್ರತಿಪಕ್ಷ ನಾಯಕ ಆರ್. ಅಶೋಕ್, ಹಾಗಾದರೆ ಬಜೆಟ್‌ನ್ನು ರಾಹುಕಾಲ ಆರಂಭವಾಗುವ 15 ನಿಮಿಷಗಳ ಮೊದಲು ಮಂಡಿಸಿದ್ದೇಕೆ, ನೀವು ಹೇಳುವುದೊಂದು, ಮಾಡುವುದು ಇನ್ನೊಂದು ಎಂದು ಕುಟುಕಿದ್ದರು.

ಆಗ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಾನು ರಾಹುಕಾಲ, ಯಮಗಂಡ ಕಾಲ, ಗುಳಿಕಕಾಲ ಇವನ್ನೆಲ್ಲಾ ನಂಬಲ್ಲ. ಸೂರ್ಯಗ್ರಹಣ, ಯುಗಾದಿ, ಶಿವರಾತ್ರಿ ದಿನವೂ ನಾನು ಮಾಂಸ ತಿನ್ನುತ್ತೇನೆ. ನೀವು ಯಾರಾದರೂ ಆ ರೀತಿ ಮಾಡಿದ್ದೀರಾ, ನನಗೆ ಎಲ್ಲಾ ದಿನವೂ ಒಂದೇ. ನಿಮ್ಮ ನಂಬಿಕೆ ನಿಮ್ಮದು, ನನ್ನ ನಂಬಿಕೆ ನನ್ನದು ಎಂದರು.

ನಾನು ದೇವರನ್ನು ನಂಬುತ್ತೇನೆ. ದೇವರಿದ್ದಾನೆ. ದೇವರಿಲ್ಲದೆ ಜಗತ್ತು ನಡೆಯಲು ಸಾಧ್ಯವಿಲ್ಲ. ಆದರೆ ದೇವಸ್ಥಾನದಲ್ಲಿ ಮಾತ್ರ ದೇವರಿದ್ದಾನೆ ಎಂಬುದನ್ನು ನಾನು ನಂಬಲ್ಲ. ದೇವರು ಎಲ್ಲಾ ಕಡೆಯೂ ಇದ್ದಾನೆ. ಅದಕ್ಕಾಗಿಯೇ ಬಸವಣ್ಣನವರು ನಾನು ಬಡವನಯ್ಯ, ಎನ್ನ ಕಾಲೇ ಕಂಭ, ನನ್ನ ದೇಹವೇ ದೇಗುಲ, ಶಿರವೇ ಹೊನ್ನ ಕಳಸವಯ್ಯ ಎಂದು ಹೇಳಿದ್ದರು. ಅದನ್ನು ನಾನು ಒಪ್ಪುತ್ತೇನೆ ಎಂದರು.

ವಿದ್ಯೆಯಲ್ಲಿ ವೈಚಾರಿಕತೆ, ವೈಜ್ಞಾನಿಕತೆ ಇರಬೇಕು. ಇಲ್ಲದಿದ್ದರೆ ಮೂಢನಂಬಿಕೆಗಳಿಗೆ ಒಳಗಾಗುತ್ತೇವೆ. ನಾನು ಹಿಂದೆ ಮೂಢನಂಬಿಕೆ ನಿಷೇಧ ಕಾಯ್ದೆಯನ್ನು ತಂದಿದ್ದೆ. ಆದರೆ ಅದು ಪರಿಣಾಮಕಾರಿಯಾಗಿ ಜಾರಿಯಾಗಲಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

## ‘ಚಾತುರ್ವರ್ಣವೇ ಅಜೆಂಡಾ; RSS ದಲಿತರ ಬಗ್ಗೆ ಮಾತಾಡುವುದು ನರಿಯೊಂದು ಕುರಿಗಳ ಮುಂದೆ ಕರುಣೆಯ ಕಣ್ಣೀರು ಸುರಿಸಿದಂತೆ’

ಬೆಂಗಳೂರು: ಶೋಷಿತ ವರ್ಗದ "ಸಾಮರಸ್ಯ" ಕೆಡಿಸುತ್ತಿರುವ ಬಲಾಢ್ಯರ ಸಂಘ, ದಲಿತರ ಎಲ್ಲಾ ಸಮುದಾಯಗಳೂ ಸಾವಿರಾರು ವರ್ಷಗಳಿಂದ ಸಾಮಾಜಿಕ, ಆರ್ಥಿಕ ಮತ್ತು ಧಾರ್ಮಿಕ ಶೋಷಣೆಗೆ ಒಳಗಾಗಿರುವಂತಹವೇ, ಮನುವಿನ ಚಾತುರ್ವರ್ಣ ವ್ಯವಸ್ಥೆಯಲ್ಲಿ ದಲಿತರೆಲ್ಲರಿಗೂ ಒಂದೇ ಸ್ಥಾನ ನೀಡಲಾಗಿತ್ತು – ಅದು ನಿಕೃಷ್ಟ ಎಂದು ಸಚಿವ ಪ್ರಿಯಾಂಕ್ ಖರ್ಗೆ ಹೇಳಿದ್ದಾರೆ.

ಈ ಸಂಬಂಧ ತಮ್ಮ ಎಕ್ಸ್ ಖಾತೆಯಲ್ಲಿ ಬರೆದುಕೊಂಡಿರುವ ಪ್ರಿಯಾಂಕ್ ಖರ್ಗೆ, ಶೋಷಕ ಸಮುದಾಯದಿಂದ ಸಾವಿರಾರು ವರ್ಷಗಳಿಂದ ಅನ್ಯಾಯ, ತಿರಸ್ಕಾರಗಳನ್ನು ಅನುಭವಿಸಿರುವ ದಲಿತ ಸಮುದಾಯವು ಬಾಬಾ ಸಾಹೇಬ ಡಾ. ಬಿ ಆರ್ ಅಂಬೇಡ್ಕರ್ ವಿರಚಿತ ಭಾರತದಲ್ಲಿ ಭರವಸೆಯ ಬದುಕಿನ ಕನಸು ಕಾಣುತ್ತಿರುವಾಗ, ಈಗ ಮತ್ತೊಮ್ಮೆ ಅದೇ ಶೋಷಕರು ಹೊಸ ವೇಷದೊಂದಿಗೆ ದಲಿತರ ಒಗ್ಗಟ್ಟನ್ನು ಒಡೆಯುವ ಹುನ್ನಾರಕ್ಕೆ ಕೈ ಹಾಕಿ ಕೇಕೆಯಲ್ಲಿ ಬೀಗುತ್ತಿದ್ದಾರೆ.

ಚಾತುರ್ವರ್ಣವನ್ನೇ ತನ್ನ ಮುಖ್ಯ ಅಜೆಂಡಾ ಮಾಡಿಕೊಂಡು ಸ್ಥಾಪನೆಯಾದ ಖಖಖಗೆ ದಲಿತರ ಬಗ್ಗೆ ಈಗ ಏಕಾಏಕಿ ಇಷ್ಟೊಂದು ಆಸಕ್ತಿ ಹುಟ್ಟಿದ್ದೇಕೆ? ಖಖಖನ ಶೋಷಕ ಸಮುದಾಯದ ವ್ಯಕ್ತಿಗಳಿಗೆ ದಲಿತ ಸಮುದಾಯದೊಳಗೆ ಏನು ಕೆಲಸ? ದಲಿತ ಸಹೋದರ ಸಮುದಾಯಗಳೆಲ್ಲವೂ ಒಗ್ಗಟ್ಟಿನಿಂದ, ಭ್ರಾತೃತ್ವದಿಂದ, ಸಾಮರಸ್ಯದಿಂದ ಇದ್ದಾವೆ.

ಈ ಸಾಮರಸ್ಯವನ್ನು ನೋಡಿ ಸಹಿಸಲಾಗದ ನಾಗಪುರದ ಸಂಘ, ತನ್ನ ಏಜೆಂಟ್ ಮುಂದೆ ಬಿಟ್ಟು ದಲಿತರ ಸಾಮರಸ್ಯ ಒಡೆಯುವ ಕೆಲಸ ಮಾಡುತ್ತಿದೆ. ಖಖಖಗೆ ದಲಿತರ ಬಗ್ಗೆ ಕಾಳಜಿ ಇದ್ದಿದ್ದೇ ಆದರೆ, ಗುಜರಾತ್, ಮಧ್ಯಪ್ರದೇಶ, ಉತ್ತರ ಪ್ರದೇಶ ಸೇರಿದಂತೆ ತನ್ನದೇ ರಾಜಕೀಯ ಬುನಾದಿಯ ಬಿಜೆಪಿ ಆಡಳಿತದ ರಾಜ್ಯಗಳಲ್ಲಿ ಒಳ ಮೀಸಲಾತಿಯ ಬಗ್ಗೆ ಚಕಾರವೇ ಎತ್ತುತ್ತಿಲ್ಲ ಏಕೆ? ಎಂದು ಪ್ರಶ್ನಿಸಿದ್ದಾರೆ.

ಈ ರಾಜ್ಯಗಳಲ್ಲಿ SCP, TSP ಅನುದಾನ ಮೀಸಲಿಡಲು ದನಿ ಎತ್ತುವುದಿಲ್ಲ ಏಕೆ? ಇದೇ RSS ನೂರಾರು ವರ್ಷಗಳಿಂದ ಯಾವೊಬ್ಬ ದಲಿತನನ್ನೂ ಸಂಘದ ಮುಖ್ಯಸ್ಥನನ್ನಾಗಿ ಮಾಡಲಿಲ್ಲ ಏಕೆ? RSS ಗೆ ದಲಿತರ ಬಗ್ಗೆ ಕಾಳಜಿ, ಪ್ರೀತಿ, ಮಮತೆ ಇದ್ದಿದ್ದೇ ಆದರೆ ಈಗಲಾದರೂ ದಲಿತರೊಬ್ಬರನ್ನು ಸಂಘದ ಸರಸಂಘಚಾಲಕನನ್ನಾಗಿ ಮಾಡಲಿ ಎಂದು ಆಗ್ರಹಿಸಿದ್ದಾರೆ.

ಸಹೋದರರೇ, ಎಚ್ಚರ ಖಖಖ ದಲಿತರ ಬಗ್ಗೆ ಮಾತಾಡುವುದು, ನರಿಯೊಂದು ಕುರಿಗಳ ಮುಂದೆ ಕರುಣೆಯ ಕಣ್ಣೀರು ಸುರಿಸಿದಂತೆ ಎಂದು ಲೇವಡಿ ಮಾಡಿದ್ದಾರೆ.

## MUDA ಹಗರಣ: ಸಿದ್ದರಾಮಯ್ಯ ಕ್ಲೀನ್‌ಚಿಟ್ ಪ್ರಶ್ನಿಸಿ ಸ್ನೇಹಮಯಿ ಕೃಷ್ಣ ಹೈಕೋರ್ಟ್ ಮೊರೆ

ಬೆಂಗಳೂರು: ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ನೀಡಿರುವ ಕ್ಲೀನ್ ಚಿಟ್ ಪ್ರಶ್ನಿಸಿದ ಸಾಮಾಜಿಕ ಕಾರ್ಯಕರ್ತರು ಸ್ನೇಹಮಯಿ ಕೃಷ್ಣ ಅವರು ಹೈಕೋರ್ಟ್ ಮೆಟ್ಟಿಲೇರಿದ್ದಾರೆ.

ಹಗರಣ ಪ್ರಕರಣ ಸಂಬಂಧ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತವರ ಕಟುಂಬ ಸದಸ್ಯರ ವಿರುದ್ಧ ಮೈಸೂರಿನ ಲೋಕಾಯುಕ್ತ ಪೊಲೀಸ್ ವರಿಷ್ಠಾಧಿಕಾರಿ ಸಲ್ಲಿಸಿದ ಬಿ ರಿಪೋರ್ಟ್ ಅನ್ನು ಅಂಗೀಕರಿಸಿದ ಜನ ಪ್ರತಿನಿಧಿಗಳ ವಿಶೇಷ ನ್ಯಾಯಾಲಯದ ಕ್ರಮ ಪ್ರಶ್ನಿಸಿ ಆರ್?ಟಿಐ ಕಾರ್ಯಕರ್ತ ಸ್ನೇಹಮಯಿ ಕೃಷ್ಣ ಹೈಕೋರ್ಟ್?ಗೆ ಅರ್ಜಿ ಸಲ್ಲಿಸಿದ್ದಾರೆ.

ಅಧಿಕಾರ ದುರುಪಯೋಗ ಆರೋಪ ಎದುರಿಸುತ್ತಿದ್ದ ಮುಖ್ಯಮಂತ್ರಿಗಳು ಮತ್ತು ಅವರ ಕುಟುಂಬದವರಿಗೆ ‘ಬಿ’ ರಿಪೋರ್ಟ್ (ಕ್ಲೋಸರ್ ರಿಪೋರ್ಟ್) ಅಂಗೀಕರಿಸಿರುವುದು ತನಿಖಾ ಪ್ರಕ್ರಿಯೆಯ ನ್ಯಾಯಸಮ್ಮತತೆ ಮತ್ತು ನಿಷ್ಪಕ್ಷಪಾತತೆಯ ಮೇಲೆ ಸಾರ್ವಜನಿಕ ವಿಶ್ವಾಸ ಕುಂದಿಸುತ್ತದೆ ಎಂದು ಆರೋಪಿಸಿದ್ದಾರೆ.

ಈ ಮೊದಲು ವಿಶೇಷ ನ್ಯಾಯಾಲಯವು ಲೋಕಾಯುಕ್ತ ಪೊಲೀಸ್ ಸಲ್ಲಿಸಿದ್ದ ‘ಬಿ’ ರಿಪೋರ್ಟ್ ಅನ್ನು ಅಂಗೀಕರಿಸಿ, ಸಿದ್ದರಾಮಯ್ಯ, ಅವರ ಪತ್ನಿ ಪಾರ್ವತಿ ಬಿಎಂ, ಮಲ್ಲಿಕಾರ್ಜುನಸ್ವಾಮಿ ಹಾಗೂ ಮತ್ತೊಬ್ಬರಿಗೆ ಕ್ಲೀನ್ ಚಿಟ್ ನೀಡಿತ್ತು.

ಪ್ರಕರಣಕ್ಕೆ ಸಂಬಂಧಿಸಿದಂತೆ ಇತರರ ವಿರುದ್ಧ ತನಿಖೆ ಮುಂದುವರಿಯುತ್ತಿರುವ ಸಂದರ್ಭದಲ್ಲಿ ಕೆಲವರಿಗೆ ಮಾತ್ರ ಮುಂಚಿತವಾಗಿ ಕ್ಲೀನ್ ಚಿಟ್ ನೀಡಿರುವುದು ತಪ್ಪು ಸಂದೇಶ ರವಾನಿಸುತ್ತದೆ.ಎಂದು ವಾದಿಸಿದ್ದಾರೆ.



ಇದರಿಂದ ದೂರುದಾರರಿಗೆ ಅನ್ಯಾಯವಾಗಿದ್ದು, ಪ್ರಕರಣದ ಸಮಗ್ರ ತನಿಖೆಗೆ ಅಡ್ಡಿಯಾಗುತ್ತದೆ ಎಂದು ಹೇಳಿದ್ದಾರೆ.

## "ಕೋವಿಡ್ ನಂತಹ ಪರಿಸ್ಥಿತಿ": ಪ್ರಧಾನಿ ಮೋದಿಯ ಹೇಳಿಕೆ ಜನರನ್ನು ಭಯಭೀತಗೊಳಿಸಿದೆ’




ಚೆನ್ನೈ: ಕೇಂದ್ರ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ತಮಿಳುನಾಡು ಮುಖ್ಯಮಂತ್ರಿ ಮತ್ತು ಡಿಎಂಕೆ ಅಧ್ಯಕ್ಷ ಎಂ.ಕೆ. ಸ್ಟಾಲಿನ್ ಅವರು, ಪ್ರಧಾನಿ ನರೇಂದ್ರ ಮೋದಿಯವರ ಇತ್ತೀಚಿನ ಹೇಳಿಕೆ ಸಾರ್ವಜನಿಕರಲ್ಲಿ ಅನಗತ್ಯ ಭೀತಿಯನ್ನು ಸೃಷ್ಟಿಸಿದೆ ಎಂದು ಬುಧವಾರ ಹೇಳಿದ್ದಾರೆ.

ಈ ಕುರಿತು ಘಿ ನಲ್ಲಿ ಪೋಸ್ಟ್ ಮಾಡಿರುವ ತಮಿಳುನಾಡು ಸಿಎಂ ಸ್ಟಾಲಿನ್, ಪ್ರಸ್ತುತ ಪರಿಸ್ಥಿತಿಯನ್ನು ಅಔಗಿಖಆ–19 ಪರಿಸ್ಥಿತಿಗೆ ಹೋಲಿಸಿರುವುದು ಈಗಾಗಲೇ ಐಕಉ ಸಿಲಿಂಡರ್‌ಗಳ ಕೊರತೆಯಿಂದ ಬಳಲುತ್ತಿರುವ ಜನರನ್ನು ಮತ್ತಷ್ಟು ಆತಂಕಕ್ಕೀಡು ಮಾಡಿದೆ ಎಂದು ಹೇಳಿದ್ದಾರೆ.

ಎಲ್ ಪಿಜಿ ಬಿಕ್ಕಟ್ಟು ದೈನಂದಿನ ಜೀವನದ ಮೇಲೆ ತೀವ್ರ ಪರಿಣಾಮ ಬೀರಿದೆ. ಅನೇಕ ರೆಸ್ಟೋರೆಂಟ್‌ಗಳು ಮುಚ್ಚಲ್ಪಟ್ಟಿವೆ ಮತ್ತು ಅನಿಲ ಪೂರೈಕೆಯಲ್ಲಿನ ಅಡಚಣೆಯಿಂದಾಗಿ ಕಾರ್ಮಿಕರು ತಮ್ಮ ಉದ್ಯೋಗ ಕಳೆದುಕೊಂಡಿದ್ದಾರೆ ಎಂದು ಸ್ಟಾಲಿನ್ ಆರೋಪಿಸಿದ್ದಾರೆ.

"ಇದು 'ಕೋವಿಡ್ ನಂತಹ ಪರಿಸ್ಥಿತಿ' ಎಂಬ ನಮ್ಮ ಪ್ರಧಾನಿಯವರ ಹೇಳಿಕೆಯು ಈಗಾಗಲೇ ಅನಿಲ ಕೊರತೆಯಿಂದ ಬಳಲುತ್ತಿರುವ ಜನರನ್ನು ಮತ್ತಷ್ಟು ಭಯಭೀತಗೊಳಿಸಿದೆ. ಹೆಚ್ಚಿನ ರೆಸ್ಟೋರೆಂಟ್‌ಗಳು ಮುಚ್ಚಲ್ಪಟ್ಟಿವೆ ಮತ್ತು ಕಾರ್ಮಿಕರು ತಮ್ಮ ಉದ್ಯೋಗ ಕಳೆದುಕೊಳ್ಳುತ್ತಿದ್ದಾರೆ" ಎಂದು ತಮಿಳುನಾಡು ಸಿಎಂ ಹೇಳಿದ್ದಾರೆ.

ಭಾರತೀಯ ಜನತಾ ಪಕ್ಷ (ಬಿಜೆಪಿ) ನೇತೃತ್ವದ ಕೇಂದ್ರ ಸರ್ಕಾರವನ್ನು ಗುರಿಯಾಗಿಸಿಕೊಂಡು, ಈ ಸಮಸ್ಯೆಯನ್ನು ಪರಿಹರಿಸಲು ತುರ್ತು ಕ್ರಮಗಳನ್ನು ತೆಗೆದುಕೊಳ್ಳುವ ಬದಲು, ಕೇಂದ್ರ ಸರ್ಕಾರ ಕ್ಷೇತ್ರ ವಿಂಗಡಣೆಯ ಕುರಿತು ಚರ್ಚೆಗಳ ಮೂಲಕ ಸಾರ್ವಜನಿಕ ಗಮನವನ್ನು ಬೇರೆಡೆಗೆ ತಿರುಗಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿದ್ದಾರೆ.

ಎಲ್‌ಪಿಜಿ ವಿತರಣೆ ಮತ್ತು ವಿದೇಶಾಂಗ ನೀತಿಯು ಕೇಂದ್ರ ಸರ್ಕಾರದ ವ್ಯಾಪ್ತಿಗೆ ಬರುತ್ತದೆ ಎಂದು ಒತ್ತಿ ಹೇಳಿದ ಸ್ಟಾಲಿನ್, ಸಮಸ್ಯೆಯನ್ನು ಪರಿಹರಿಸಲು ತಮಿಳುನಾಡು ಸರ್ಕಾರವು ತನ್ನ ಅಧಿಕಾರ ವ್ಯಾಪ್ತಿಯಲ್ಲಿ ಸಾಧ್ಯವಿರುವ ಎಲ್ಲಾ ಕ್ರಮಗಳನ್ನು ತೆಗೆದುಕೊಂಡಿದೆ ಎಂದು ತಿಳಿಸಿದ್ದಾರೆ.

## ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಕೌಟುಂಬಿಕ ಹಿಂಸಾಚಾರ ಪ್ರಕರಣಗಳಲ್ಲಿ ತೀವ್ರ ಹೆಚ್ಚಳ!

ಮೈಸೂರು: ಆತಂಕಕಾರಿ ಬೆಳವಣಿಗೆಯಲ್ಲಿ, ಕಳೆದ ಮೂರು ವರ್ಷಗಳಲ್ಲಿ ರಾಜ್ಯಾದ್ಯಂತ ಮಹಿಳೆಯರ ಮೇಲಿನ ಕೌಟುಂಬಿಕ ದೌರ್ಜನ್ಯ ಪ್ರಕರಣಗಳು ತೀವ್ರವಾಗಿ ಏರಿಕೆಯಾಗಿವೆ.

ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಇತ್ತೀಚಿನ ಮಾಹಿತಿಯ ಪ್ರಕಾರ, ಆಯೋಗವು 2023–24 ರಲ್ಲಿ ಒಟ್ಟು 2,179 ದೂರುಗಳನ್ನು ಸ್ವೀಕರಿಸಿತ್ತು. 2024–25 ರಲ್ಲಿ 2,907 ದೂರುಗಳನ್ನು ಮತ್ತು 2025–26 ರಲ್ಲಿ(ಜನವರಿ 2026 ರವರೆಗೆ) 4,482 ದೂರುಗಳನ್ನು ಸ್ವೀಕರಿಸಿದೆ.

2023–24 ರಲ್ಲಿ 434 ಕೌಟುಂಬಿಕ ದೌರ್ಜನ್ಯ ದೂರುಗಳಾಗಿದ್ದು, ಈ ಸಂಖ್ಯೆ 2024–25 ರಲ್ಲಿ 458 ಕ್ಕೆ ಏರಿತ್ತು ಮತ್ತು 2025–26 ರಲ್ಲಿ(ಏಪ್ರಿಲ್ 2025 ರಿಂದ ಜನವರಿ 2026 ರವರೆಗೆ) 668 ಕ್ಕೆ ಏರಿಕೆಯಾಗಿದೆ.

ಸಂತ್ರಸ್ತರು, ಪೊಲೀಸರು ಮತ್ತು ಕಾನೂನು ಸೇವೆಗಳ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುವ ಮಹಿಳಾ ಆಯೋಗವು 2023–24ರಲ್ಲಿ 434 ಪ್ರಕರಣಗಳನ್ನು, 2024–25ರಲ್ಲಿ 450 ಪ್ರಕರಣಗಳನ್ನು (ಇನ್ನೂ ಎಂಟು ಪ್ರಕರಣಗಳು ಬಾಕಿ ಉಳಿದಿವೆ) ಮತ್ತು 2025–26ರಲ್ಲಿ 472 ಪ್ರಕರಣಗಳನ್ನು ಪರಿಹರಿಸಿದೆ.

ಕೌಟುಂಬಿಕ ಹಿಂಸಾಚಾರದ ಹೊರತಾಗಿ, ರಕ್ಷಣೆ ಕೋರಿ, ವರದಕ್ಷಿಣೆ ಕಿರುಕುಳ, ಕೆಲಸದ ಸ್ಥಳದಲ್ಲಿ ಕಿರುಕುಳ, ಪೊಲೀಸ್ ಕಿರುಕುಳ ಮತ್ತು ಲೈಂಗಿಕ ಕಿರುಕುಳಕ್ಕೆ ಸಂಬಂಧಿಸಿದ ದೂರುಗಳಿಂದ ಆಯೋಗ ತುಂಬಿದೆ. ತನಿಖಾ ಮತ್ತು ಮಧ್ಯವರ್ತಿ ಸಂಸ್ಥೆಯಾಗಿ ಕಾರ್ಯನಿರ್ವಹಿಸುವ ಇದು ಪೊಲೀಸ್ ತನಿಖೆಗಳನ್ನು ಮೇಲ್ವಿಚಾರಣೆ ಮಾಡುತ್ತದೆ. ಸಾರ್ವಜನಿಕ ವಿಚಾರಣೆಗಳನ್ನು ನಡೆಸುತ್ತದೆ.

2023–24ರಲ್ಲಿ ರಕ್ಷಣೆ ಕೋರಿ 586 ದೂರುಗಳು, 2024–25ರಲ್ಲಿ 943 ಮತ್ತು 2025–26ರಲ್ಲಿ 1,289 ಕ್ಕೆ ಏರಿದೆ ಎಂದು ಡೇಟಾ ತೋರಿಸುತ್ತದೆ. ಲೈಂಗಿಕ ಕಿರುಕುಳದ ಪ್ರಕರಣಗಳು ಮೂರು ವರ್ಷಗಳಲ್ಲಿ ಕ್ರಮವಾಗಿ 26, 29 ಮತ್ತು




30 ರಷ್ಟಿವೆ. ಕೆಲಸದ ಸ್ಥಳದಲ್ಲಿ ಮಹಿಳೆಯರ ಮೇಲಿನ ಲೈಂಗಿಕ ದೌರ್ಜನ್ಯದ ದೂರುಗಳು 2023–24ರಲ್ಲಿ 95 ರಿಂದ 2024–25ರಲ್ಲಿ 131 ಕ್ಕೆ ಏರಿದೆಯ ನಂತರ 2025–26ರಲ್ಲಿ 123ಕ್ಕೆ ಸ್ವಲ್ಪ ಇಳಿದಿದೆ. ಏತನ್ಮಧ್ಯೆ, "ಪ್ರೇಮ ಸಂಬಂಧಿತ" ಪ್ರಕರಣಗಳು ಸಹ ಅದೇ ಅವಧಿಯಲ್ಲಿ 29 ರಿಂದ 45 ಕ್ಕೆ ಏರಿದ್ದು, ಕಳೆದ ವರ್ಷ 62 ಕ್ಕೆ ಏರಿದೆ.

ದಿ ನ್ಯೂ ಇಂಡಿಯನ್ ಎಕ್ಸ್‌ಪ್ರೆಸ್‌ನೊಂದಿಗೆ ಮಾತನಾಡಿದ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ನಾಗಲಕ್ಷ್ಮಿ ಚೌಧರಿ, ನಗರ ಪ್ರದೇಶಗಳಿಗಿಂತ ಗ್ರಾಮೀಣ ಪ್ರದೇಶಗಳಲ್ಲಿ ಕೌಟುಂಬಿಕ ಹಿಂಸಾಚಾರ ಪ್ರಕರಣಗಳು ಹೆಚ್ಚಾಗಿ ವರದಿಯಾಗುತ್ತವೆ ಎಂದು ಹೇಳಿದ್ದಾರೆ.

"ಇಂದು, ಮಹಿಳೆಯರು ಹೆಚ್ಚು ವಿದ್ಯಾವಂತರು ಮತ್ತು ಆರ್ಥಿಕವಾಗಿ ಸ್ವತಂತ್ರರಾಗಿದ್ದಾರೆ. ಕಾನೂನು ಹಕ್ಕುಗಳ ಬಗ್ಗೆ ಹೆಚ್ಚಿನ ಅರಿವಿನೊಂದಿಗೆ, ಅವರು ದೂರುಗಳನ್ನು ದಾಖಲಿಸಲು ಹೆಚ್ಚು ಹೆಚ್ಚು ಮುಂದೆ ಬರುತ್ತಿದ್ದಾರೆ" ಎಂದು ಅವರು ತಿಳಿಸಿದ್ದಾರೆ.

## ಖಸಾಯಿ ಖಾನೆ ಮತ್ತು ಮಾಂಸ ಮಾರಾಟ ನಿಷೇಧ

ಗದಗ: ಗದಗ ಬೆಟಗೇರಿ ನಗರಸಭೆ ವ್ಯಾಪ್ತಿಯ ಖಸಾಯಿಖಾನೆಗಳಲ್ಲಿ ಪ್ರಾಣಿವಧೆ ಮಾಡುವ ಹಾಗೂ ಮಾಂಸ ಮಾರಾಟಗಾರರಿಗೆ ತಿಳಿಯಪಡಿಸುವುದೇನೆಂದರೆ ಶ್ರೀರಾಮ ನವಮಿ ಅಂಗವಾಗಿ ಮಾರ್ಚ 27 ರಂದು ಜಾನುವಾರುಗಳ ವಧೆ ಹಾಗೂ ಮಾಂಸ ಮಾರಾಟ ಮಾಡುವುದನ್ನು ನಿಷೇಧಿಸಲಾಗಿದೆ. ಮಾಂಸ ಮಾರಾಟ ಮಾಡುವವದಾಗಲಿ ಹಾಗೂ ಜಾನುವಾರುಗಳನ್ನು ವಧೆ ಮಾಡದಿರಲು ಸೂಚಿಸಲಾಗಿದೆ. ಈ ಆದೇಶವನ್ನು ಉಲ್ಲಂಘಿಸಿದಲ್ಲಿ ಅಂಥವರ ಲೈಸನ್ಸನ್ನು ರದ್ದು ಮಾಡಲಾಗುವುದು ಎಂದು ಗದಗ ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶಿಕ್ಷಕರ ವರ್ಗಾವಣೆ ನಿಯಂತ್ರಣ ತಿದ್ದುಪಡಿ ಕಾಯಿದೆ ವಿಧಾನಸಭೆಯಲ್ಲಿ ಅಂಗೀಕಾರ



ಬೆಂಗಳೂರು: ಶಾಲೆಗಳನ್ನು ಮೂರು ವರ್ಗಗಳಾಗಿ ವಿಂಗಡಿಸಿ, ತುರ್ತು ಸೇವಾ ಗುಂಪು ಎಂದು ಪರಿಗಣಿಸಿ ಶಿಕ್ಷಕರ ವರ್ಗಾವಣೆ ಸ್ವರೂಪದಲ್ಲಿ ಆಮೂಲಾಗ್ರ ಬದಲಾವಣೆಗೆ ಅವಕಾಶ ಕಲ್ಪಿಸುವ ‘ಕರ್ನಾಟಕ ರಾಜ್ಯ ನಾಗರಿಕ ಸೇವೆಗಳು (ಶಿಕ್ಷಕರ ವರ್ಗಾವಣೆ ನಿಯಂತ್ರಣ) (ತಿದ್ದುಪಡಿ) ಮಸೂದೆಗೆ ವಿಧಾನಸಭೆ ಮಂಗಳವಾರ ಅನುಮೋದನೆ ನೀಡಲಾಯಿತು.

ಮಸೂದೆಯು ಶಿಕ್ಷಕರನ್ನು ಬೋಧಕೇತರ ಹುದ್ದೆಗಳಿಗೆ ವರ್ಗಾವಣೆ ಮಾಡುವುದನ್ನು ನಿಷೇಧಿಸುತ್ತದೆ. ಶಿಕ್ಷಕರ ಕೊರತೆಯನ್ನು ನೀಗಿಸುವುದು ಇದರ ಉದ್ದೇಶವಾಗಿದೆ. ಗರ್ಭಿಣಿಯರು ಮತ್ತು ಐದು ವರ್ಷಕ್ಕಿಂತ ಕಡಿಮೆ ವಯಸ್ಸಿನ ಮಕ್ಕಳನ್ನು ಹೊಂದಿರುವ ಮಹಿಳೆಯರು ತಮಗೆ ಬೇಕಾಗುವ ಯಾವುದೇ ಸ್ಥಳಕ್ಕೆ ವರ್ಗಾವಣೆಗೆ ಅರ್ಹರಾಗಿರುತ್ತಾರೆ.

ಮಹಿಳಾ ಶಿಕ್ಷಕರು ತಮ್ಮ ಮಕ್ಕಳ ಲಾಲನೆ ಪಾಲನೆ ನೋಡಿಕೊಳ್ಳಲು ಅನುವು ಮಾಡಿಕೊಡುವುದು ಇದರ ಉದ್ದೇಶವಾಗಿದೆ. ಮಗು ಪಾಲನೆಗಾಗಿ ತವರು ಅಥವಾ ಗಂಡನ ಊರಲ್ಲೆ? ಟೀಚರ್ ಆಗಬಹುದು. ಹೆರಿಗೆಯಾದ 5 ವರ್ಷದ ತನಕ ಶಿಕ್ಷಕಿ ಇಚ್ಛಿಸಿದೆಡೆಗೆ ವರ್ಗಾವಣೆ, 2 ಮಕ್ಕಳಿಗಷ್ಟೆ? ಸೇವೆ ಸೀಮಿತ ಎಂದು ಹೇಳಿದ್ದಾರೆ.

50,000 ಖಾಲಿ ಹುದ್ದೆಗಳಿಗೆ ಬದಲಾಗಿ 15,000 ಶಿಕ್ಷಕರನ್ನು ನೇಮಿಸಿಕೊಳ್ಳಲು ಬಜೆಟ್‌ನಲ್ಲಿ ಅವಕಾಶ ಕಲ್ಪಿಸಲಾಗಿದೆ. ಪರಿಶಿಷ್ಟ ಜಾತಿಗಳ (ಖಅ) ಆಂತರಿಕ ಮೀಸಲಾತಿಯ ಸಮಸ್ಯೆ ಬಗೆಹರಿದ ನಂತರ ಪ್ರಕ್ರಿಯೆಯು ಪ್ರಾರಂಭವಾಗುತ್ತದೆ ಎಂದು ಅವರು ಹೇಳಿದರು, ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ 5,800 ಹುದ್ದೆಗಳನ್ನು ನೀಡಲಾಗುತ್ತದೆ

ಶಾಲೆಗಳು, ಪದವಿಪೂರ್ವ ಕಾಲೇಜುಗಳಲ್ಲಿ ಕನಿಷ್ಠ ಸೇವಾ ಅವಧಿ ಪೂರ್ಣಗೊಳಿಸಿದ ಶಿಕ್ಷಕರು ಅಥವಾ ಉಪನ್ಯಾಸಕರಿಗೆ ಮೊದಲ ವರ್ಗದ ಹುದ್ದೆಗಳ ಲಭ್ಯತೆ ಆಧಾರದಲ್ಲಿ ವರ್ಗಾವಣೆ ಕೋರಲು ಅವಕಾಶ ಕಲ್ಪಿಸಲಾಗಿದೆ.

ವರ್ಗ – 1: ಕರ್ನಾಟಕ ಪಬ್ಲಿಕ್ ಶಾಲೆಗಳು, ಆದರ್ಶ ವಿದ್ಯಾಲಯಗಳು, ಪಿಎಂಶ್ರೀ ಶಾಲೆಗಳು, ವರ್ಗ– 2: ವಿದ್ಯಾರ್ಥಿಗಳ ಸಂಖ್ಯೆ 250ಕ್ಕಿಂತ ಹೆಚ್ಚು ಇರುವ ಸರಕಾರಿ ಶಾಲೆಗಳು, ಪದವಿಪೂರ್ವ ಕಾಲೇಜುಗಳು ವರ್ಗ– 3: ವರ್ಗ 1 ಮತ್ತು 2ಕ್ಕೆ ಸೇರಿದ ಪ್ರೌಢಶಾಲಾ ಮುಖ್ಯ ಶಿಕ್ಷಕರು, ಉಪಪ್ರಾಂಶುಪಾಲರು, ಪದವಿಪೂರ್ವ ಕಾಲೇಜುಗಳ ಪ್ರಾಂಶುಪಾಲರು ಇದರ ಅಡಿ ಬರುತ್ತಾರೆ.

ವರ್ಗಾವಣೆಗಳನ್ನು ಕೌನ್ಸೆಲಿಂಗ್ ಮೂಲಕ ಮಾತ್ರ ಮಾಡಲಾಗುತ್ತದೆ, ಇದಕ್ಕಾಗಿ ಕನಿಷ್ಠ ಸೇವಾ ಅವಧಿ 12 ವರ್ಷಗಳು. DIET, DSERT ಇತ್ಯಾದಿಗಳಲ್ಲಿ ಕನಿಷ್ಠ ಮೂರು ವರ್ಷಗಳ ಕಾಲ ಬೋಧಕೇತರ ಪಾತ್ರಗಳಲ್ಲಿ ಸೇವೆ ಸಲ್ಲಿಸಿದವರು ತಮ್ಮ ಬೋಧನಾ ವೃಂದಕ್ಕೆ ಮರಳಬೇಕಾಗುತ್ತದೆ.

# ಕ್ಷಯ ರೋಗ ನಿರ್ಮೂಲನೆಗೆ ಎಲ್ಲರೂ ಕೈ ಜೋಡಿಸೋಣ



**ಬೆಳಗಾವಿ ವಾರ್ತೆ**

**ಗದಗ:** ಕ್ಷಯರೋಗವನ್ನು ಸೋಲಿಸಲು ನಾವೆಲ್ಲರೂ ಮುಂದಾಗೋಣ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಸ್.ಎಸ್. ನೀಲಗುಂದ ತಿಳಿಸಿದರು.

ನಗರದ ಡಾ.ಎಸ್.ವ್ಹಿ. ತೋಟಗಂಟಿಮಠ, ನರ್ಸಿಂಗ್ ಕಾಲೇಜಿನಲ್ಲಿ ವಿಶ್ವ ಕ್ಷಯರೋಗ ದಿನಾಚರಣೆಯ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕ್ಷಯ ರೋಗವನ್ನು ಶೀಘ್ರ ಪತ್ತೆಹಚ್ಚಿ ಸಮರ್ಪಕ ಚಿಕಿತ್ಸೆ ನೀಡುವ ಮೂಲಕ ಸಂಪೂರ್ಣ ನಿರ್ಮೂಲನೆ ಮಾಡಬಹುದಾಗಿದೆ ಎಂದು ಡಾ.ಎಸ್.ಎಸ್.ನೀಲಗುಂದ ತಿಳಿಸಿದರು.

ಡಾ.ಎಸ್.ವ್ಹಿ.ತೋಟಗಂಟಿಮಠ ನರ್ಸಿಂಗ್ ಕಾಲೇಜದ ಪ್ರಾಚಾರ್ಯ ಶಿವಕುಮಾರ ಕಾತರಕಿ ಸಮಾರಂಭದ ಅಧ್ಯಕ್ಷತೆ ವಹಿಸಿ ಕ್ಷಯರೋಗ ನಿರ್ಮೂಲನೆಗಾಗಿ ಆರೋಗ್ಯ ಇಲಾಖೆಯೊಂದಿಗೆ ನಾವೆಲ್ಲರೂ ಕೈಜೋಡಿಸುವುದಲ್ಲದೇ ಮುಂದಿನ ದಿನಮಾನಗಳಲ್ಲಿ ಕ್ಷಯರೋಗ ನಿರ್ಮೂಲನೆ ಮಾಡುವುದು ಮತ್ತು ಜನಜಾಗೃತಿ ಮೂಡಿಸುವುದು ಅತ್ಯಾವಶ್ಯಕವಾಗಿದೆ ಎಂದು ಹೇಳಿದರು.

ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ. ಅರುಂಧತಿ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮವನ್ನು 2025ರಲ್ಲಿ ಸಾಧಿಸಿದ ಪ್ರಗತಿಯ ಅಂಕಿ–ಅಂಶಗಳನ್ನು ಜೊತೆಗೆ ಕ್ಷಯರೋಗದ ಬಗ್ಗೆ ಮಾಹಿತಿ ನೀಡುತ್ತಾ ನಮ್ಮೆಲ್ಲರ ಜೊತೆ ಸಮುದಾಯದವರು ಹಾಗೂ ಸಂಘ ಸಂಸ್ಥೆಯವರು ಕೈಜೋಡಿಸುವುದರಿಂದ ದೇಶವನ್ನು ಹಾಗೂ ಕರ್ನಾಟಕವನ್ನು ಕ್ಷಯ ಮುಕ್ತ ಕರ್ನಾಟಕ'' ವನ್ನಾಗಿಸುವಲ್ಲಿ ಸಹಾಯವಾಗುತ್ತದೆ ಮತ್ತು ಈಗಾಗಲೇ ಪ್ರತಿ ಕ್ಷಯರೋಗ ಘಟಕದಿಂದ ಎರಡೆರಡು ಗ್ರಾಮಪಂಚಾಯತಿಗಳನ್ನು ಆಯ್ದುಕೊಂಡಿದ್ದು ಗ್ರಾಮ ಪಂಚಾಯತಿ ಸಿಬ್ಬಂದಿಗಳ ಹಾಗೂ ಚುನಾಯಿತ ಪ್ರತಿನಿಧಿಗಳ, ಕೆಹೆ???ಪಿಟಿ ಸಿಬ್ಬಂದಿಯವರು, ಹಾಗೂ ಆಶಾ ಕಾರ್ಯಕರ್ತೆಯರಿಂದ ಪ್ರತಿ ಹಂತದಲ್ಲೂಕ್ಷಯ ಮುಕ್ತ ಗ್ರಾಮ"ವನ್ನಾಗಿಸಲು ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ನರ್ಸಿಂಗ್ ಕಾಲೇಜಿನ ಸಂಯೋಜಕ ವಿನಯ ಕುಪ್ಪಸದ, ಆರೋಗ್ಯ ಇಲಾಖೆಯ ಸಿಬ್ಬಂದಿಯವರು, ನರ್ಸಿಂಗ್ ಕಾಲೇಜಿನ ಸಿಬ್ಬಂದಿಯವರು, ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹಾಗೂ ಇನ್ನಿತರ ಸಿಬ್ಬಂದಿಯವರು ಹಾಜರಿದ್ದರು.

ಕು,ಅನುಷ್ಕಾ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಗಣೇಶ ಬಾಗಡೆ ಸ್ವಾಗತಿಸಿದರು. ಅಶ್ವತ್ಥೆಡ್ಡಿ ಕಾರ್ಯಕ್ರಮ ಸಂಯೋಜಕರು ವಂದಿಸಿದರು. ಎಫ್ ಪಿ ಮೋದಿನ್ನವರ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಕಾರ್ಯಕ್ರಮ ನಿರೂಪಿಸಿದರು.

# ಇಂಧನ ಕೊರತೆ : ಪರದಾಟ

**ಬೆಳಗಾವಿ ವಾರ್ತೆ**

**ನವಲಗುಂದ:** ತಾಲ್ಲೂಕು ಕೇಂದ್ರವಾದ ನವಲಗುಂದದಲ್ಲಿ ಕಳೆದ ಎರಡು ದಿನಗಳಿಂದ ಡಿಜೈಲ್, ಪೆಟ್ರೋಲ್‌ಗಳ ಪೂರೈಕೆ ಸ್ಥಗಿತಗೊಂಡಿ ದ್ದರಿಂದ ವಾಹನ ಸವಾರರು ಹಾಗೂ ಪ್ರಯಾಣಿಕರು ಪರದಾಡುವಂತಹ ಸ್ಥಿತಿ ಬಂದೊದಗಿದೆ. ಜತೆಗೆ ವಾಣಿಜ್ಯ ಬಳಕೆಯ ಸಿಲಿಂಡರ್ ಕೊರತೆಯಿಂದಾಗಿ ಹೊಟೇಲ್ ಮಾಲೀಕರು ಕಟ್ಟಿಗೆ ಒಲೆಯಲ್ಲಿಯೇ ಅಗತ್ಯ ಆಹಾರ ಸಿದ್ದಪಡಿಸುತ್ತಿದ್ದಾರೆ.

ಮಂಗಳವಾರ ಪಟ್ಟಣದಲ್ಲಿ ವಾರದ ಸಂಜೆ ದಿನವಾಗಿದ್ದರಿಂದ ಹೆಚ್ಚು ಜನಸಂಚಾರವಿರುವುದನ್ನು ಗಮನಿಸಿದ ಹೋಟೆಲ್ ಮಾಲೀಕರು ಬೆಳಿಗ್ಗೆಯೇ ಕಟ್ಟಿಗೆ ಒಲೆಯ ಮೇಲೆ ಸೀಮಿತ ಆಹಾರಗಳನ್ನು ಸಿದ್ದಪಡಿಸುತ್ತಿರುವ ದೃಶ್ಯಗಳು ಸಾಮಾನ್ಯವಾಗಿದ್ದವು.

ಇನ್ನು ಬೀದಿ ಬದಿ ವ್ಯಾಪಾರಸ್ಥರಂತೂ ಕಟ್ಟಿಗೆ ಒಲೆಯನ್ನು ಹಚ್ಚಿ ತಿಂಡಿಗಳನ್ನು ತಯಾರಿಸುತ್ತಿರುವುದು ಪಟ್ಟಣದ ಬೀದಿಗಳಲ್ಲಿ ಕಂಡು ಬಂತು.

ಎರಡು ದಿಗಳಿಂದ ಪಟ್ಟಣದಲ್ಲಿರುವ 3 ಪೆಟ್ರೋಲ್ ಬಂಕ್‌ಗಳಲ್ಲಿ ಗ್ರಾಹಕರಿಗೆ ಅಗತ್ಯವಾದ ಪೆಟ್ರೋಲ್,ಡಿಜೈಲ್ ಪೂರೈಕೆಯಲ್ಲಿ ವ್ಯತ್ಯಯವಾಗಿದ್ದು




ಮಂಗಳವಾರ ಪೆಟ್ರೋಲ್,ಡಿಜೈಲ್‌ಗಳ ಪೂರೈಕೆ ಸ್ಥಗಿತಗೊಂಡಿದ್ದರಿಂದ ಎಲ್ಲ ಪೆಟ್ರೋಲ್ ಬಂಕ್‌ಗಳು ನೋ ಸ್ಟಾಕ್ ಬೋರ್ಡ ಹಾಕವು ಮೂಲಕ ಬಂದ ಗ್ರಾಹಕರಲ್ಲಿ ನಿರಾಶೆ ಮೂಡಿಸಿವೆ.

ಗೃಹ ಬಳಕೆ ಸಿಲಿಂಡ್ ಕೊರತೆ ಇಲ್ಲ, ಬದಲಾಗಿ ಕಳೆದ ಎರಡು ದಿನಗಳಿಂದ ವಾಣಿಜ್ಯ ಬಳಕೆ ಸಿಲೇಂಡರ್ ಪೂರೈಕೆ ಸ್ಥಗಿತಗೊಂಡಿದೆ ಎಂದು ಗ್ಯಾಸ್ ಎಜೇನ್ಸಿ ಮಾಲೀಕರು ತಿಳಿಸಿದ್ದಾರೆ.

# ಪೆಟ್ರೋಲ್, ಡೀಸೆಲ್ ಸಮಸ್ಯೆ ಇಲ್ಲ; ಸುಳ್ಳು ಸುದ್ದಿ ಹರಡಿದರೆ ಹುಷಾರ್!

**ಬೆಳಗಾವಿ ವಾರ್ತೆ**

**ಧಾರವಾಡ:** ಎಲ್ಪಿಜಿ ಸಿಲಿಂಡರ್, ಪೆಟ್ರೋಲ್ ಮತ್ತು ಡೀಸೆಲ್ ಕುರಿತಾಗಿ ಸಾರ್ವಜನಿಕರಲ್ಲಿ ಹರಡುತ್ತಿರುವ ತಪ್ಪು ಮಾಹಿತಿಗೆ ಯಾರೂ ಆತಂಕ ಪಡುವ ಅಗತ್ಯವಿಲ್ಲ. ಧಾರವಾಡ ಜಿಲ್ಲೆಯಲ್ಲಿ ಇಂಧನ ಕೊರತೆಯಿಲ್ಲ, ವದಂತಿ ನಂಬಿ ಆತಂಕ ಪಡಬೇಡಿ; ಸುಳ್ಳು ಸುದ್ದಿ ಹರಡಿದರೆ ಕಾನೂನು ಕ್ರಮ ಕೈಗೊಳ್ಳಲು ಪೊಲೀಸ್ ಇಲಾಖೆಗೆ ನಿರ್ದೇಶನ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ಸ್ನೇಹಲ್.ಆರ್ ಅವರು ತಿಳಿಸಿದ್ದಾರೆ.

ಜಿಲ್ಲೆಯ ಎಲ್ಲಾ ಪೆಟ್ರೋಲ್ ಬಂಕ್‌ಗಳಲ್ಲಿ ಈಗಾಗಲೇ ಸಾಕಷ್ಟು ಇಂಧನ ದಾಸ್ತಾನು ಲಭ್ಯವಿದ್ದು, ನಾಲ್ಕರಿಂದ ಐದು ದಿನಗಳಿಗೆ ಬೇಕಾಗುವಷ್ಟು ಸಂಗ್ರಹ ಇದೆ ಎಂದು ಅವರು ಹೇಳಿದ್ದಾರೆ.

ಸಾಮಾನ್ಯವಾಗಿ ಜಿಲ್ಲೆಯಲ್ಲಿ ಪ್ರತಿದಿನ 60 ರಿಂದ 65 ಕಿಲೋ ಲೀಟರ್ (ಕೆ.ಎಲ್) ಇಂಧನ ಸರಬರಾಜಾಗುತ್ತಿದ್ದು, ಕಳೆದ ಎರಡು, ಮೂರು ದಿನಗಳಲ್ಲಿ ಸುಳ್ಳು ಸುದ್ದಿ ಹರಡಿದ ಪರಿಣಾಮವಾಗಿ 100 ರಿಂದ 110 ಕೆ.ಎಲ್ ವರೆಗೆ ಸರಬರಾಜು ಮಾಡಲಾಗುತ್ತಿದೆ. ಆತಂಕದಿಂದ ಪೆಟ್ರೋಲ್ ಮತ್ತು ಡೀಸೆಲ್ ಖರೀದಿಗಾಗಿ ಬಂಕ್‌ಗಳಲ್ಲಿ ಅನಾವಶ್ಯಕವಾಗಿ ಸರತಿ ಸಾಲಿನಲ್ಲಿ ನಿಲ್ಲುವ ಅಗತ್ಯವಿಲ್ಲ ಎಂದು ತಿಳಿಸಿದ್ದಾರೆ.

ಒಂದು ವೇಳೆ ದಾಸ್ತಾನು ಕಡಿಮೆಯಾದರೂ, ಇಂಡಿಯನ್ ಆಯಿಲ್ ಕಾರ್ಪೋರೇಷನ್ ಲಿಮಿಟೆಡ್ (ಐಓಸಿಎಲ್), ಭಾರತ್ ಪೆಟ್ರೋಲಿಯಂ ಕಾರ್ಪೋರೇಷನ್ ಲಿಮಿಟೆಡ್( ಬಿಪಿಸಿಎಲ್) ಹಾಗೂ ಹಿಂದುಸ್ತಾನ್ ಪೆಟ್ರೋಲಿಯಂ ಕಾರ್ಪೋರೇಷನ್ ಲಿಮಿಟೆಡ್ (ಎಚ್‌ಪಿಸಿಎಲ್) ಸಂಸ್ಥೆಗಳು ಅಗತ್ಯ ಸರಬರಾಜು ಮಾಡಲಿವೆ ಎಂದು ಅವರು ಹೇಳಿದ್ದಾರೆ.





ಜಿಲ್ಲೆಯಲ್ಲಿ ಪ್ರಸ್ತುತ 10,026 ಗೃಹ ಬಳಕೆಯ ಎಲ್ಪಿಜಿ ಸಿಲಿಂಡರ್‌ಗಳು ಹಾಗೂ 800 ವಾಣಿಜ್ಯ ಸಿಲಿಂಡರ್‌ಗಳು ದಾಸ್ತಾನುಗಳಲ್ಲಿ ಲಭ್ಯವಿವೆ ಎಂದು ಅವರು ತಿಳಿಸಿದ್ದಾರೆ. ಸುಳ್ಳು ಮಾಹಿತಿ ಹರಡಿ ಸಾರ್ವಜನಿಕರಲ್ಲಿ ಆತಂಕ ಉಂಟು ಮಾಡುವವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಜಿಲ್ಲಾಧಿಕಾರಿ ಪ್ರಕಟಣೆಯಲ್ಲಿ ಎಚ್ಚರಿಕೆ ನೀಡಿದ್ದಾರೆ.

# ಉಚಿತ ಆರೋಗ್ಯ ತಪಾಸಣಾ ಶಿಬಿರ

**ಬೆಳಗಾವಿ ವಾರ್ತೆ**

**ಮುನವಳ್ಳಿ:** ಮದ್ಲೂರ ಗ್ರಾಮದ ಗ್ರಾಮ ಪಂಚಾಯತ ಮದ್ಲೂರ ಹಾಗೂ ಜೈಕಿಸಾನ ಜಂಕ್ಷನ ಮುನವಳ್ಳಿ ಇವರ ಸಹಯೋಗದಲ್ಲಿ ಉಚಿತ ಆರೋಗ್ಯ ತಪಾಸಣಾ ಶಿಬಿರ



ಜರುಗಿತು. ಅಧ್ಯಕ್ಷತೆ ಪಕ್ರುಸಾಬ ದೊಡ್ಡಮನಿ ವಹಿಸಿದ್ದರು,

ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯಾಧಿಕಾರಿ ಡಾ. ಮೇಘರಾಜ ಶೀಲವಂತ, ಡಾ. ವರ್ಷಾ ನೇಲಕರ, ಶಿಲ್ಪಾ ಕಾರಬಾರಕಿಮಠ, ಚೇತನ ಪಾಟೀಲ, ಕಾರ್ತಿಕ ಹಿರೇಮಠ, ಪ್ರಕಾಶ ಪತ್ತಾರ, ಶಶಿಧರ ರುದ್ರಾಪುರ, ಪ್ರದೀಪಗೌಡಾ ಬೀರಾದಾರ, ಆಶಾಕಾರ್ಯಕರ್ತರು, ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಹಸಿರುಕ್ರಾಂತಿ ಹರಿಕಾರ ಡಾ. ಬಾಬು ಜಗಜೀವನ ರಾಂ ಅವರ ಹಾಗೂ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ ಅವರ ಜಯಂತಿಗಳನ್ನು ಅದ್ದೂರಿಯಾಗಿ, ಅರ್ಥಪೂರ್ಣವಾಗಿ ಆಚರಣೆ: ಜಿಲ್ಲಾಧಿಕಾರಿ ಸ್ನೇಹಲ್ ಆರ್




**ಬೆಳಗಾವಿ ವಾರ್ತೆ**

**ಧಾರವಾಡ:** ಹಸಿರುಕ್ರಾಂತಿ ಹರಿಕಾರ, ಮಾಜಿ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ 119 ಜನ್ಮದಿನಾಚರಣೆಯನ್ನು ಏಪ್ರಿಲ್ 5 ರಂದು ಹಾಗೂ ಭಾರತರತ್ನ, ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ ಅವರ 135 ನೇ ಜಯಂತಿಯನ್ನು ಏಪ್ರಿಲ್ 14 ರಂದು ಜಿಲ್ಲಾಡಳಿತದಿಂದ ಅದ್ದೂರಿಯಾಗಿ ಮತ್ತು ಅರ್ಥಪೂರ್ಣವಾಗಿ ಜಿಲ್ಲಾಮಟ್ಟದಲ್ಲಿ ಆಚರಿಸಲಾಗುತ್ತದೆ. ಕಾರ್ಯಕ್ರಮಗಳಲ್ಲಿ ಸಾರ್ವಜನಿಕರು ಸಕ್ರಿಯವಾಗಿ ಭಾಗವಹಿಸಬೇಕೆಂದು ಜಿಲ್ಲಾಧಿಕಾರಿ ಸ್ನೇಹಲ್ ಆರ್. ಅವರು ಹೇಳಿದರು.

ಅವರು ಇಂದು (ಮಾ.24) ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ನೂತನ ಸಭಾಂಗಣದಲ್ಲಿ ಸಮಾಜ ಕಲ್ಯಾಣ ಇಲಾಖೆ, ಜಿಲ್ಲಾ ಪಂಚಾಯತ್ ಹಾಗೂ ಜಿಲ್ಲಾಡಳಿತದಿಂದ ಆಯೋಜಿಸುವ ಉಪಪ್ರಧಾನಿ ಡಾ. ಬಾಬು ಜಗಜೀವನ ರಾಂ ಅವರ ಹಾಗೂ ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ ಅವರ ಜಯಂತಿ ಕಾರ್ಯಕ್ರಮಗಳ ಸಿದ್ಧತೆ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ, ಮಾತನಾಡಿದರು.

ಡಾ. ಬಾಬು ಜಗಜೀವನ ರಾಂ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಇಬ್ಬರು ಮಹಾತ್ಮರ ಜಯಂತಿಗಳನ್ನು ವಿದ್ಯಾರ್ಥಿಗಳಿಗೆ ಮತ್ತು ಸಾರ್ವಜನಿಕರಿಗೆ ವಿಚಾರ ಸಂಕಿರಣ, ವಿಶೇಷ ಉಪನ್ಯಾಸಗಳನ್ನು ಆಯೋಜಿಸುವ ಮೂಲಕ ಅರ್ಥಪೂರ್ಣವಾಗಿ ಆಚರಿಸಲಾಗುತ್ತದೆ ಎಂದರು.

ಅಂಬೇಡ್ಕರ ಭವನದಲ್ಲಿ ವಿಚಾರ ಸಂಕಿರಣವನ್ನು ನಡೆಸಲಾಗುತ್ತದೆ. ಜಯಂತಿ ದಿನದಂದು ಬೆಳಿಗ್ಗೆ ನಗರದ ಪ್ರಮುಖ ವೃತ್ತ, ಬೀದಿಗಳ ಮೂಲಕ ಮಹನೀಯರ ಭಾವಚಿತ್ರದ ಭವ್ಯ ಮೆರವಣಿಗೆಯನ್ನು ಆಯೋಜಿಸಲಾಗುತ್ತದೆ. ಜಯಂತಿ ವೇದಿಕೆ ಕಾರ್ಯಕ್ರಮವನ್ನು ಕರ್ನಾಟಕ ವಿದ್ಯಾವರ್ಧಕ ಸಂಘದ ಡಾ.ಪಾಟೀಲ ಪುಟ್ಟಪ್ಪ ಸಭಾಭವನದಲ್ಲಿ ಜರುಗಿಸಲಾಗುತ್ತದೆ ಎಂದು ಅವರು ಹೇಳಿದರು.

ಕಳೆದ ವರ್ಷ ಎಸ್.ಎಸ್.ಎಲ್.ಸಿ., ಪಿಯುಸಿ ವಾರ್ಷಿಕ ಪರೀಕ್ಷೆಗಳಲ್ಲಿ ಹೆಚ್ಚು ಅಂಕ ಪಡೆದು ಸಾಧನೆ ಮಾಡಿದ ಸಮಾಜದ ವಿದ್ಯಾರ್ಥಿಗಳಿಗೆ ಮತ್ತು ವಿವಿಧ ಕ್ಷೇತ್ರಗಳ ಸಾಧಕರಿಗೆ ವೇದಿಕೆ ಕಾರ್ಯಕ್ರಮದಲ್ಲಿ ಸನ್ಮಾನಿಸಿ, ಗೌರವಿಸಲಾಗುತ್ತದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಾರ್ವಜನಿಕರು ಹಾಗೂ ಮುಖಂಡರು ಜಯಂತಿ ಕಾರ್ಯಕ್ರಮಗಳಲ್ಲಿ ಕೇವಲ ಹಾಜರಾಗುವುದಷ್ಟೆ ಅಲ್ಲದೆ, ಸಕ್ರಿಯವಾಗಿ ಭಾಗವಹಿಸುವುದು ಅತ್ಯಂತ ಅಗತ್ಯ. ಡಾ. ಬಿ.ಆರ್. ಅಂಬೇಡ್ಕರ್ ಹಾಗೂ ಡಾ. ಬಾಬು ಜಗಜೀವನ ರಾಂ ಅವರ ಜೀವನ ಸಾಧನೆಗಳು, ಸಮಾಜ ಸೇವೆ ಮತ್ತು ಸಮಾನತೆಯ ಸಂದೇಶಗಳನ್ನು ಪ್ರತಿಯೊಬ್ಬರಿಗೂ ತಲುಪಿಸುವ ಉದ್ದೇಶದಿಂದ ಜಯಂತಿಗಳನ್ನು ಅರ್ಥಪೂರ್ಣವಾಗಿ ಆಚರಿಸಬೇಕು ಎಂದು ಅವರು ತಿಳಿಸಿದರು.

ಹುಬ್ಬಳ್ಳಿ ಧಾರವಾಡ ಮಹಾನಗರ ಪೊಲೀಸ್ ಆಯುಕ್ತ ಎನ್. ಶಶಿಕುಮಾರ್ ಅವರು ಮಾತನಾಡಿ, ಜಯಂತಿ ಕಾರ್ಯಕ್ರಮಗಳು ಕೆಲವೊಂದು ಸಮುದಾಯಗಳಿಗೆ ಮಾತ್ರ ಸೀಮಿತವಾಗದೆ, ಎಲ್ಲಾ ಸಮುದಾಯಗಳ ಜನರು ಭಾಗವಹಿಸುವಂತಾಗಬೇಕು. ಆಗ ಮಾತ್ರ ಇಂತಹ ಕಾರ್ಯಕ್ರಮಗಳು ನಿಜವಾದ ಅರ್ಥಪೂರ್ಣತೆಯನ್ನು ಪಡೆಯುತ್ತವೆ ಎಂದು ಅವರು ಹೇಳಿದರು.

ಯಾವುದೇ ಕ್ಷೇತ್ರದಲ್ಲಿ ಸಾಧನೆ ಮಾಡಿದ ಸಾಧಕರನ್ನು ಗುರುತಿಸಿ, ಅವರಿಗೆ ಗೌರವ ನೀಡಿ, ಹಾಗೂ ಕಾರ್ಯಕ್ರಮಗಳಿಗೆ ಆಹ್ವಾನಿಸಿದರೆ ಜಯಂತಿಗಳಿಗೆ ಇನ್ನು ಹೆಚ್ಚಿನ ಮೆರಗು ನೀಡುತ್ತದೆ ಎಂದು ಅವರು ತಿಳಿಸಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ ಅವರು ಸಭೆಯಲ್ಲಿ ಮಾತನಾಡಿದರು.

ಸಭೆಯಲ್ಲಿ ಎಂ.ಅರವಿಂದ, ಲಕ್ಷ್ಮಣ ಬಕ್ಕಾಯಿ, ಸುರೇಶ ಖಾನಪುರೆ, ನಿರ್ಮಲಾ ಚಲವಾದಿ, ಸುಶೀಲಮ್ಮ ಚಲವಾದಿ, ಅಶೋಕ ದೊಡಮನಿ, ಕಲ್ಮೇಶ ಹಾದಿಮನಿ, ದೇವಾನಂದ ರತ್ನಾಕರ್, ಕೆಂಚಪ್ಪ ಮಲ್ಲಮ್ಮನವರ ಸೇರಿದಂತೆ ವಿವಿಧ ಪ್ರಮುಖರು ಮಾತನಾಡಿ, ಜಯಂತಿಗಳ ಅರ್ಥಪೂರ್ಣ ಆಚರಣೆಗೆ ಸಲಹೆ, ಸೂಚನೆಗಳನ್ನು ನೀಡಿದರು.

ವೇದಿಕೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ ಇದ್ದರು.

ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಜಗದೀಶ ಹೆಬ್ಬಳ್ಳಿ ಸ್ವಾಗತಿಸಿ, ಸಭೆ ನಿರ್ವಹಿಸಿದರು.

ಸಭೆಯಲ್ಲಿ ಹನಮಂತ ಮಾರಡಗಿ, ಅರ್ಜುನ ಮಾದರ, ಮಹದೇವ ಕೇದಾರ, ಗೌರಮ್ಮ ದೊಡಮನಿ ಸೇರಿದಂತೆ ವಿವಿಧ ದಲಿತ ಮುಖಂಡರು, ಸಂಘ ಸಂಸ್ಥೆಗಳ ಪ್ರಮುಖರು, ಸಾರ್ವಜನಿಕರು ಭಾಗವಹಿಸಿದ್ದರು.

# ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

ಗದಗ: ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ಅಶೋಕ ಮಂದಾಲಿ ಅವರ ಅಧ್ಯಕ್ಷತೆಯಲ್ಲಿ ಮಾರ್ಚ 30 ರಂದು ಬೆಳಿಗ್ಗೆ 11 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ವಿ. ಸಿ. ಹಾಲ್‌ನಲ್ಲಿ ಗದಗ ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯನ್ನು ಏರ್ಪಡಿಸಲಾಗಿದೆ ಎಂದು ತಾ.ಪಂ. ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಸಮಿತಿಯ ಸದಸ್ಯ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕ್ಷಯ ರೋಗ ನಿರ್ಮೂಲನೆಗೆ ಎಲ್ಲರೂ ಕೈ ಜೋಡಿಸೋಣ



**ಬೆಳಗಾವಿ ವಾರ್ತೆ**

**ಗದಗ:** ಕ್ಷಯರೋಗವನ್ನು ಸೋಲಿಸಲು ನಾವೆಲ್ಲರೂ ಮುಂದಾಗೋಣ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ.ಎಸ್.ಎಸ್. ನೀಲಗುಂದ ತಿಳಿಸಿದರು.

ನಗರದ ಡಾ.ಎಸ್.ವ್ಹಿ.ತೋಟಗಂಟಿಮಠ, ನರ್ಸಿಂಗ್ ಕಾಲೇಜದಲ್ಲಿ ಮಂಗಳವಾರ ವಿಶ್ವ ಕ್ಷಯರೋಗ ದಿನಾಚರಣೆಯ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಕ್ಷಯ ರೋಗವನ್ನು ಶೀಘ್ರ ಪತ್ತೆಹಚ್ಚಿ ಸಮರ್ಪಕ ಚಿಕಿತ್ಸೆ ನೀಡುವ ಮೂಲಕ ಸಂಪೂರ್ಣ ನಿರ್ಮೂಲನೆ ಮಾಡಬಹುದಾಗಿದೆ ಎಂದು ಡಾ.ಎಸ್.ಎಸ್ .ನೀಲಗುಂದ ತಿಳಿಸಿದರು. ಡಾ.ಎಸ್.ವ್ಹಿ.ತೋಟಗಂಟಿಮಠ ನರ್ಸಿಂಗ್ ಕಾಲೇಜದ ಪ್ರಾಚಾರ್ಯ ಶಿವಕುಮಾರ ಕಾತರಕಿ ಸಮಾರಂಭದ ಅಧ್ಯಕ್ಷತೆ ವಹಿಸಿ ಕ್ಷಯರೋಗ ನಿರ್ಮೂಲನೆಗಾಗಿ ಆರೋಗ್ಯ ಇಲಾಖೆಯೊಂದಿಗೆ ನಾವೆಲ್ಲರೂ ಕೈಜೋಡಿಸುವುದಲ್ಲದೇ ಮುಂದಿನ ದಿನಮಾನಗಳಲ್ಲಿ ಕ್ಷಯರೋಗ ನಿರ್ಮೂಲನೆ ಮಾಡುವುದು ಮತ್ತು ಜನಜಾಗೃತೆ ಮೂಡಿಸುವುದು ಅತ್ಯಾವಶ್ಯಕವಾಗಿದೆ ಎಂದು ಹೇಳಿದರು.

ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ. ಅರುಂಧತಿ ಕುಲಕರ್ಣಿ ಪ್ರಾಸ್ತಾವಿಕವಾಗಿ ಮಾತನಾಡಿ ರಾಷ್ಟ್ರೀಯ ಕ್ಷಯರೋಗ ನಿರ್ಮೂಲನಾ ಕಾರ್ಯಕ್ರಮವನ್ನು 2025ರಲ್ಲಿ ಸಾಧಿಸಿದ ಪ್ರಗತಿಯ ಅಂಕಿ–ಅಂಶಗಳನ್ನು ಜೊತೆಗೆ ಕ್ಷಯರೋಗದ ಬಗ್ಗೆ ಮಾಹಿತಿ ನೀಡುತ್ತಾ ನಮ್ಮೆಲ್ಲರ ಜೊತೆ ಸಮುದಾಯದವರು ಹಾಗೂ ಸಂಘ ಸಂಸ್ಥೆಯವರು ಕೈಜೋಡಿಸುವುದರಿಂದ ದೇಶವನ್ನು ಹಾಗೂ ಕರ್ನಾಟಕವನ್ನು "ಕ್ಷಯ ಮುಕ್ತ ಕರ್ನಾಟಕ" ವನ್ನಾಗಿಸುವಲ್ಲಿ ಸಹಾಯವಾಗುತ್ತದೆ ಮತ್ತು ಈಗಾಗಲೇ ಪ್ರತಿ ಕ್ಷಯರೋಗ ಘಟಕದಿಂದ ಎರಡೆರಡು ಗ್ರಾಮಪಂಚಾಯತಿಗಳನ್ನು ಆಯ್ದುಕೊಂಡಿದ್ದು ಗ್ರಾಮ ಪಂಚಾಯತಿ ಸಿಬ್ಬಂದಿಗಳ ಹಾಗೂ ಚುನಾಯಿತ ಪ್ರತಿನಿಧಿಗಳ, ಕೆಹೆಚ್‌ಪಿಟಿ ಸಿಬ್ಬಂದಿಯವರು, ಹಾಗೂ ಆಶಾ ಕಾರ್ಯಕರ್ತೆಯರಿಂದ ಪ್ರತಿ ಹಂತದಲ್ಲೂ "ಕ್ಷಯ ಮುಕ್ತ ಗ್ರಾಮ"ವನ್ನಾಗಿಸಲು ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ನರ್ಸಿಂಗ್ ಕಾಲೇಜಿನ ಸಂಯೋಜಕ ವಿನಯ ಕುಪ್ಪಸದ, ಆರೋಗ್ಯ ಇಲಾಖೆಯ ಸಿಬ್ಬಂದಿಯವರು, ನರ್ಸಿಂಗ್ ಕಾಲೇಜಿನ ಸಿಬ್ಬಂದಿಯವರು, ವಿದ್ಯಾರ್ಥಿ, ವಿದ್ಯಾರ್ಥಿನಿಯರು ಹಾಗೂ ಇನ್ನಿತರ ಸಿಬ್ಬಂದಿಯವರು ಹಾಜರಿದ್ದರು. ಕು,ಅನುಷ್ಕಾ ಹಾಗೂ ಸಂಗಡಿಗರು ಪ್ರಾರ್ಥಿಸಿದರು. ಗಣೇಶ ಬಾಗಡೆ ಸ್ವಾಗತಿಸಿದರು. . ಅಶ್ವತ್ಥೆಡ್ಡಿ ಕಾರ್ಯಕ್ರಮ ಸಂಯೋಜಕರು ವಂದಿಸಿದರು. ಎಫ್ ಪಿ ಮೋದಿನ್ನವರ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಕಾರ್ಯಕ್ರಮ ನಿರೂಪಿಸಿದರು.

# ವಿಶ್ವ ಗ್ರಾಹಕ ಹಕ್ಕುಗಳ ದಿನಾಚರಣೆ: ಗುಣಮಟ್ಟ ಖಾತರಿ ಪಡಿಸಿಕೊಂಡು ಉತ್ಪನ್ನ ಖರೀದಿಸಿ – ಅಪರ ಜಿಲ್ಲಾಧಿಕಾರಿ ಇ.ಬಾಲಕೃಷ್ಣ



**ಬೆಳಗಾವಿ ವಾರ್ತೆ**

**ವಿಜಯನಗರ (ಹೊಸಪೇಟೆ):** ಗ್ರಾಹಕರು ಯಾವುದೇ ರೀತಿಯ ಉತ್ಪನ್ನ ಖರೀದಿಸಬೇಕಾದರೆ ಉತ್ಪನ್ನದ ಪ್ರಮಾಣ ಮತ್ತು ಗುಣಮಟ್ಟ ಖಾತರಿ ಪಡಿಸಿಕೊಂಡು ಖರೀದಿಸಬೇಕು ಎಂದು ಅಪರ ಜಿಲ್ಲಾಧಿಕಾರಿ ಇ. ಬಾಲಕೃಷ್ಣ ಹೇಳಿದರು.

ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಹಾಗೂ ಆಹಾರ ಸುರಕ್ಷತಾ ಇಲಾಖೆ ಸಹಯೋಗದಲ್ಲಿ ಮಂಗಳವಾರ ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ವಿಶ್ವ ಗ್ರಾಹಕರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬ ಗ್ರಾಹಕನೂ ತಾನು ಖರೀದಿಸುವ ವಸ್ತುಗಳ ಗುಣಮಟ್ಟ, ತೂಕ ಮತ್ತು ಅಳತೆ ಪ್ರಮಾಣದ ಬಗ್ಗೆ ಅರಿತಿರಬೇಕು. ಗ್ರಾಹಕನೇ ಮಾರುಕಟ್ಟೆಯ ರಾಜ ಎನ್ನುವ ಮಾತು ಅನ್ವಯವಾಗಬೇಕಾದರೆ, ಗ್ರಾಹಕರು ಸಹ ತಮ್ಮ ಹಕ್ಕುಗಳ ಬಗ್ಗೆ ಅರಿವು ಹೊಂದಿರಬೇಕು. ಗ್ರಾಹಕರು ವಿವಿಧ ಮಾಧ್ಯಮಗಳಲ್ಲಿ ಬಿತ್ತರಿಸುವ ಆಕರ್ಷಣೀಯ ಜಾಹೀರಾತುಗಳಿಗೆ ಮಾರು ಹೋಗಿ ಉತ್ಪನ್ನ ಖರೀದಿಸಬಾರದು. ಬದಲಾಗಿ ಉತ್ಪನ್ನದ ಗುಣಮಟ್ಟ, ಸುರಕ್ಷತೆಯ ಬಗ್ಗೆ ಪರಿಶೀಲಿಸಿ ಖರೀದಿಸಬೇಕು. ಯಾವುದೇ ವಸ್ತು, ಉತ್ಪನ್ನ ಖರೀದಿಸಿದಾಗ ತಪ್ಪದೇ ಅಧಿಕೃತ ಬಿಲ್ ಅಥವಾ ರಶೀದಿ ಪಡೆಯಬೇಕು. ಉತ್ಪನ್ನ ಖರೀದಿಸಿದಾಗ ಲೋಪದೋಷ ಉಂಟಾದಾಗ ದೂರು ದಾಖಲಿಸಲು ಅಥವಾ ಗ್ರಾಹಕರ ಹಕ್ಕು ಪ್ರತಿಪಾದಿಸಲು ಸಹಕಾರಿಯಾಗಲಿದೆ. ವ್ಯಾಪಾರಸ್ಥರು ಕಡ್ಡಾಯವಾಗಿ ಮುದ್ರೆ ಹಾಕಿಸಿದ ಎಲೆಕ್ಟ್ರಾನಿಕ್ ತೂಕದ ಯಂತ್ರಗಳನ್ನೇ ಬಳಸಬೇಕು. ಗ್ರಾಹಕರಿಗೆ ಈ ಬಗ್ಗೆ ಅನುಮಾನವಿದ್ದಲ್ಲಿ ತಕ್ಷಣ ಸಂಬಂಧಪಟ್ಟ ಇಲಾಖೆಗೆ ದೂರು ನೀಡಬಹುದು. ವಸ್ತು ಅಥವಾ ಸೇವೆಯಲ್ಲಿ ನ್ಯೂನತೆ ಕಂಡುಬಂದಲ್ಲಿ ಗ್ರಾಹಕರು ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ದೂರು ನೀಡಿ . ಕಾನೂನಾತ್ಮಕವಾಗಿ ನ್ಯಾಯ ಪಡೆಯಲು ಅವಕಾಶವಿದೆ ಎಂದು ತಿಳಿಸಿದರು.

ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಅಧ್ಯಕ್ಷ ಎನ್. ತಿಪ್ಪೇಸ್ವಾಮಿ ಅಧ್ಯಕ್ಷತೆ ವಹಿಸಿದ್ದರು. ಹಿರಿಯ ವಕೀಲ ಕರುಣಾನಿಧಿ ಗ್ರಾಹಕ ಹಕ್ಕುಗಳ ಕುರಿತು ಉಪನ್ಯಾಸ ನೀಡಿದರು.

ಗ್ರಾಹಕರ ದಿನಾಚರಣೆ ಪ್ರಯುಕ್ತ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ವತಿಯಿಂದ ತಾತ್ಕಾಲಿಕ ಸ್ಟಾಲ್ ಸ್ಥಾಪಿಸಿ ಗ್ರಾಹಕರಿಗೆ ಅರಿವು ಮೂಡಿಸಲಾಯಿತು.

ಈ ವೇಳೆ ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಉಪನಿರ್ದೇಶಕ ರಿಯಾಜ್, ಕಾನೂನು ಮಾಪನ ಶಾಸ್ತ್ರ ಇಲಾಖೆ ಸಹಾಯಕ ನಿಯಂತ್ರಕ ಮನೋಜ್ ಕುಮಾರ್, ವಕೀಲರ ಸಂಘದ ಅಧ್ಯಕ್ಷ ಗುಜ್ಜಲ ನಾಗರಾಜ್, ಕಾರ್ಯದರ್ಶಿ ಕೃಷ್ಣದೇವರಾಯಲು ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಗ್ರಾಹಕರು ಉಪಸ್ಥಿತರಿದ್ದರು.

# ಬಾಲ, ಕಿಶೋರ ಕಾರ್ಮಿಕ ಪದ್ಧತಿ ಕುರಿತು ಬೀದಿ ನಾಟಕ




**ಬೆಳಗಾವಿ ವಾರ್ತೆ**

**ಬಳ್ಳಾರಿ:** ಕರ್ನಾಟಕ ಸರ್ಕಾರ, ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಬಳ್ಳಾರಿ, ಜಿಲ್ಲಾ ಕಾರ್ಮಿಕ ಇಲಾಖೆ ಬಳ್ಳಾರಿ, ಜಿಲ್ಲಾ ಬಾಲಕಾರ್ಮಿಕ ಯೋಜನೆ ಸೊಸೈಟಿ ಬಳ್ಳಾರಿ, ಹಾಗೂ ಅಕ್ಷಯ ಕಲಾ ಟ್ರಸ್ಟ್ ಹೊಸ ಯರಗುಡಿ, ಇವರು ಸಂಯುಕ್ತ ಆಶ್ರಯದಲ್ಲಿ, ಬಳ್ಳಾರಿ ಜಿಲ್ಲೆಯ ಬಳ್ಳಾರಿ ತಾಲೂಕು, ಗ್ರಾಮಂತರ, ಕುರುಗೋಡು, ಕುರುಗೋಡು ಗ್ರಾಮಾಂತರ, ಸಂಡೂರು, ಸಂಡೂರು ಗ್ರಾಮಂತರ, ಈ ತಾಲೂಕುಗಳಲ್ಲಿ ಆಯ್ಕೆ ಆದಂತಹ 12 ಗ್ರಾಮಗಳಲ್ಲಿ ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಪದ್ಧತಿಗಳ ಕುರಿತು ಬೀದಿ ನಾಟಕ ಜಾಗೃತಿ ಹಾಡುಗಳು ಮೂಲಕ ಜನರಿಗೆ ಜಾಗೃತಿ ಮೂಡಿಸಲಾಯಿತು ಈ ಕಾರ್ಯಕ್ರಮದ ಉದ್ಘಾಟನೆಯನ್ನು ಎನ್ ರಾಜೇಶ್ ಹೊಸಮನಿ ಸರ್ ನ್ಯಾಯಾಧೀಶರು ಉದ್ಘಾಟಿಸಿದರು ಇವರ ಜೊತೆಯಲ್ಲಿ ಅಪರ ಜಿಲ್ಲಾಧಿಕಾರಿಗಳಾದ ಮಹಮದ್ ಜುಬೇರ್ ಮತ್ತು ಕಾರ್ಮಿಕ ಅಧಿಕಾರಿಗಳು ಯೋಜನೆ ನಿರ್ದೇಶಕರಾದ ಮೌನೇಶ್ ಸರ್, ಮಹಿಳಾ ಮತ್ತು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿಗಳು,ವಿವಿಧ ಸಂಘ–ಸಂಸ್ಥೆಯವರು, ಮಕ್ಕಳ ಕಲ್ಯಾಣ ಸಮಿತಿಯವರು ಅಕ್ಷಯ ಟ್ರಸ್ಟ್ ಮತ್ತು ಸಿರುಗುಪ್ಪ ನೇತ್ರಕಲಾ ಸಂಘ ಇನ್ನು ಅನೇಕ ಕಲಾವಿದರು ಜಿಲ್ಲೆಯ ಐದು ತಾಲೂಕುಗಳಲ್ಲಿ ಬೀದಿ ನಾಟಕ ಜಾಗೃತಿ ಹಾಡುಗಳು ಮೂಲಕ ತಂಡದವರು ಅತ್ಯಂತ ಯಶಸ್ವಿಯಾಗಿ ಕಾರ್ಯಕ್ರಮವನ್ನು ನಡೆಸಿ ಕೊಟ್ಟಿರುತ್ತಾರೆಂದು ಈ ಮೂಲಕ ಕೇಳಿಕೊಳ್ಳುತ್ತೇವೆ ಈ ಕಾರ್ಯಕ್ರಮದಲ್ಲಿ ಕಲಾವಿದರಗಳಾದ ಹೆಚ್,ಜಿ ಸುಂಕಪ್ಪ, ಎಸ್ ಎಂ ಹುಲುಗಪ್ಪ, ಎಚ್ ರಮೇಶ್, ಡಿ ಹೇಮಂತ್, ಆರ್ ವಿಜಯ್, ನಾಗಮೂರ್ತಿ, ಮಾರಣ್ಣ, ವೀರೇಶ್ ದಳವಾಯ್ತಿ, ಇನ್ನು ಅನೇಕ ಕಲಾವಿದರ ಸೇರಿ ಕಾರ್ಯಕ್ರಮವನ್ನು ಅತ್ಯಂತ ಯಶಸ್ವಿಯಾಗಿ ನಡೆಸಿ ಕೊಟ್ಟಿರುತ್ತಾರೆ.

# ಸಂಸ್ಕಾರಯುತ ಬದುಕಿಗೆ ಕಲಿಕೆ ಅಗತ್ಯ: ರಘುಪ್ರೇಮಾಚಾರ್

**ಬೆಳಗಾವಿ ವಾರ್ತೆ**

**ಕೊಪ್ಪಳ:** 'ಮಕ್ಕಳು ಉತ್ತಮವಾಗಿ ಮತ್ತು ಸಂಸ್ಕಾರಯುತವಾಗಿ ಭವಿಷ್ಯ ಕಟ್ಟಿಕೊಳ್ಳಲು ಧಾರ್ಮಿಕ ಶಿಕ್ಷಣ ಮತ್ತು ಅವುಗಳ ಆಚರಣೆಗಳ ಬಗ್ಗೆ ತಿಳಿದುಕೊಳ್ಳುವುದು ಅಗತ್ಯ' ಎಂದು ಇಲ್ಲಿನ ರಾಘವೇಂದ್ರ ಸ್ವಾಮಿಗಳ ಮಠದ ಪ್ರಧಾನ ಅರ್ಚಕ ರಘು ಪ್ರೇಮಾಚಾರ್ ಮುಳಗುಂದ ಹೇಳಿದರು.

ನಗರದ ಸಮಾನ ಮನಸ್ಕ ಬ್ರಾಹ್ಮಣ ಸ್ನೇಹಿತರು ಸೇರಿ ವಿಠ್ಠಲ ಕೃಷ್ಣ ವಾಣಿಜ್ಯ ಸಂಕೀರ್ಣ ಹಿಂಭಾಗದಲ್ಲಿ ಹಮ್ಮಿಕೊಂಡಿರುವ ವಸಂತ ಧಾರ್ಮಿಕ ಶಿಕ್ಷಣ ಶಿಬಿರವನ್ನು ಮಂಗಳವಾರ ಉದ್ಘಾಟಿಸಿ ಮಾತನಾಡಿದ ಅವರು 'ಶಿಬಿರ ಆಯೋಜನೆ ಸಂಪ್ರದಾಯ ಉತ್ತಮವಾದದ್ದು, ಇದು ಹಿಂದಿನಿಂದಲೂ ನಡೆದುಕೊಂಡು ಬಂದಿದೆ. ಮಕ್ಕಳಲ್ಲಿ ಧರ್ಮದ ಬಗ್ಗೆ ಜಾಗೃತಿ ಮೂಡಿಸಲು ಅನುಕೂಲವಾಗುತ್ತದೆ. ಸಂಧ್ಯಾವಂದನೆ ಮಾಡದ ದೊಡ್ಡವರು ಕೂಡ ಶ್ಲೋಕಗಳನ್ನು ಕಲಿತುಕೊಳ್ಳಬೇಕು' ಎಂದು ಸಲಹೆ ನೀಡಿದರು.

ಶಿಬಿರ ನಡೆಸಿಕೊಡಲು ಬಂದಿರುವ ಉಡುಪಿಯ ಯದುನಂದನ ಅಚಾರ್ ಮಾತನಾಡಿ 'ಕೊಪ್ಪಳದಲ್ಲಿ ಮೊದಲ ಬಾರಿಗೆ ಕಾರ್ಯಕ್ರಮ ಆಯೋಜಿಸಿದ್ದು ಖುಷಿ ನೀಡಿದೆ. ಯಾವುದೇ ಕಾರ್ಯಕ್ರಮ ಮಾಡಿದರೂ ಮೊದಲು ದೀಪ ಬೆಳಗಿಸಲಾಗುತ್ತದೆ. ಇದು ಜ್ಞಾನದ ಪ್ರತೀಕವಾಗಿದೆ. ಚಿಕ್ಕವಯಸ್ಸಿನಲ್ಲಿದ್ದಾಗಲೇ ಕಲಿಸಿದರೆ ಮಕ್ಕಳಲ್ಲಿ ಸಂಸ್ಕಾರ ಬೆಳೆಯುತ್ತದೆ' ಎಂದು ಹೇಳಿದರು.



ಅರ್ಚಕ ಗೋವಿಂದಾಚಾರ್ ಬಾದರ್ಲಿ, ಅಖಿಲ ಭಾರತ ಬ್ರಾಹ್ಮಣ ಮಹಾಸಭಾದ ಜಿಲ್ಲಾ ಚುನಾಯಿತ ಪ್ರತಿನಿಧಿ ಗುರುರಾಜ ಎನ್. ಜೋಶಿ, ರಾಜ್ಯ ಕೇಂದ್ರ ಕಾರ್ಯಕಾರಿಣಿ ಸದಸ್ಯ ಎಚ್.ಬಿ. ದೇಶಪಾಂಡೆ, ಸಮಾಜದ ಮುಖಂಡರಾದ ವೇಣುಗೋಪಾಲ ಜಹಗೀರದಾರ್, ರಮೇಶ ಜಹಗೀರದಾರ್ ಸೇರಿದಂತೆ ಅನೇಕರು ಪಾಲ್ಗೊಂಡಿದ್ದರು.

# ನಿಧನ ವಾರ್ತೆ



**ಬೆಳಗಾವಿ ವಾರ್ತೆ**

**ಗೋಕಾಕ:** ನಗರದ ಬಣಗಾರ ಓಣಿಯ ನಿವಾಸಿ. ಲಿಂಗಾಯತ ಸಮಾಜದ ರವಿ ರಾ ಅಂದಾನಿ.(45) ದಿ25ರಂದು ನಿಧನರಾದರು ಮೃತರ ತಂದೆ, ತಾಯಿ ಹಾಗೂ ಪತ್ನಿ ಇಬ್ಬರು ಪುತ್ರಿಯರು ಓರ್ವ ಪುತ್ರ ಸೇರಿದಂತೆ ಅಪಾರ ಬಂದು ಬಳಗ ಬಿಟ್ಟು ಅಗಲಿದ್ದಾರೆ.

# ಆಳವಾದ ಅಧ್ಯಯನದಿಂದ ಯಶಸ್ಸು ಸಾಧ್ಯ: ಡಾ.ನಾಗೇಂದ್ರಪ್ಪ




**ಬೆಳಗಾವಿ ವಾರ್ತೆ**

**ಗಂಗಾವತಿ:** ಇದು ಸ್ಪರ್ಧಾತ್ಮಕ ಯುಗ. ಅದರಲ್ಲೂ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಸಾಫಲ್ಯತೆ ಗಳಿಸುವುದು ಸುಲಭ ಸಾಧ್ಯವಲ್ಲ. ಆಳವಾದ ಅಧ್ಯಯನದಿಂದ ಮಾತ್ರ ಯಶಸ್ಸು ಸಾಧ್ಯ ಎಂದು ಹಗರಿಬೊಮ್ಮನಹಳ್ಳಿಯ ಜಿವಿಪಿಪಿ ಸರಕಾರಿ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಡಾ.ನಾಗೇಂದ್ರಪ್ಪ ಬಿ. ಹೇಳಿದರು.

ನಗರದ ಶ್ರೀ ಕೊಲ್ಲಿ ನಾಗೇಶ್ವರರಾವ್ ಗಂಗಯ್ಯ ಸರಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಮಂಗಳವಾರ ಕಾಲೇಜಿನ ಇತಿಹಾಸ ಮತ್ತು ಪುರಾತತ್ವ ಅಧ್ಯಯನ ವಿಭಾಗದ ಅಶ್ರಯದಲ್ಲಿ ಹಾಗೂ ಆಂತರಿಕ ಗುಣಮಟ್ಟ ಭರವಸೆ ಕೋಶದ ಸಹಯೋಗದಲ್ಲಿ ನಡೆದ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಇತಿಹಾಸ ಅಧ್ಯಯನದ ಮಹತ್ವ ಕುರಿತು ಅವರು ವಿಶೇಷ ಉಪನ್ಯಾಸ ನೀಡಿದರು.

ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಇತಿಹಾಸ ಅಧ್ಯಯನದ ಮಹತ್ವ ದೊಡ್ಡಮಟ್ಟದಲ್ಲಿದೆ. ಸಾಮಾನ್ಯ ಪತ್ರಿಕೆಯ ನೂರು ಪ್ರಶ್ನೆಗಳಲ್ಲಿ ಸುಮಾರು 15–20 ಪ್ರಶ್ನೆಗಳು ಇತಿಹಾಸ ವಿಷಯವನ್ನು ಆಧರಿಸಿರುತ್ತವೆ. ಇತಿಹಾಸದ ಅಧ್ಯಯನದಲ್ಲಿ ಮೂಲಾಧಾರಗಳು ಮತ್ತು ಸಾಂಸ್ಕೃತಿಕ ಇತಿಹಾಸದ ಕಾಲಾನುಕ್ರಮದ ಹಾಗೂ ಕಾರ್ಯಕಾರಣ ಸಂಬಂಧದ ಗ್ರಹಿಕೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಅತಿ ಮುಖ್ಯವಾಗಿದೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಚಾರ್ಯ ಡಾ.ಶಿವರಾಜ ಜಿ.ಗುರಿಕಾರ ಮಾತನಾಡಿ, ಇತಿಹಾಸ ಮರೆತವರು ಇತಿಹಾಸ ಸೃಷ್ಟಿಸಲಾರರು. ಆಸಕ್ತಿ, ಕಲಿಕೆ ಮತ್ತು ಗ್ರಹಿಕೆ ಅಧ್ಯಯನದಲ್ಲಿ ಮಹತ್ವದ ಪಾತ್ರ ವಹಿಸುತ್ತವೆ. ವಿದ್ಯಾರ್ಥಿಗಳು ಇತಿಹಾಸ ಓದುವುದಕ್ಕಷ್ಟೇ ಸೀಮಿತವಾಗಬಾರದು. ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ವಿನ ಇತಿಹಾಸ ಸೃಷ್ಟಿಸಲು ಸನ್ನದ್ಧರಾಗಬೇಕು ಎಂದು ಕರೆ ನೀಡಿದರು.

ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕಿ ಡಾ.ಮುಮ್ತಾಜ್ ಬೇಗಂ ಮಾತನಾಡಿ, ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅಣಿಯಾಗಬೇಕೆಂದರೆ ಟೇಬಲ್, ಕುರ್ಚಿ, ಜಗಮಗಿಸುವ ಬೆಳಕು ಇರಬೇಕೆಂದಿಲ್ಲ. ಡಾ.ಬಾಬಾಸಾಹೇಬ್ ಅಂಬೇಡ್ಕರ್, ಡಾ.ಅಬ್ದುಲ್ ಕಲಾಂ ಅವರ ಬದುಕು ನಮಗೆ ಪ್ರೇರಣೆಯಾಗಬೇಕು. ನಾಯಿ ಕೊಡೆಗಳಂತಿರುವ ತರಬೇತಿ ಕೇಂದ್ರಗಳಲ್ಲಿ ಕಲಿತರೆ ಯಶಸ್ಸು ಸಿಗುತ್ತದೆ ಎಂಬುದು ತಪ್ಪು ಗ್ರಹಿಕೆ.

ಮನೆಯಲ್ಲೇ ಕುಳಿತು ಕಂಠಪಾಠ ಮಾಡುವುದಕ್ಕಿಂತ ವಿಷಯದ ಎಲ್ಲ ಆಯಾಮಗಳನ್ನು ಅರಿತು ಓದಿ, ಗ್ರಹಿಸಿಕೊಂಡರೆ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಗೆಲುವು ಪಡೆಯಬಹುದು ಎಂದರು.

ಇತಿಹಾಸ ವಿಭಾಗದ ಸಹಾಯಕ ಪ್ರಾಧ್ಯಾಪಕ ಡಾ.ಇಬ್ರಾಹೀಂ ಸಾಬ ಪ್ರಾಸ್ತಾವಿಕ ಮಾತನಾಡಿ, ಇಂದಿನ ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಇತಿಹಾಸ ವಿಷಯ ಮೇಲಿರುವ ಮಹತ್ವವನ್ನು ತಿಳಿಸಿದರು.

ಇತಿಹಾಸ ವಿಭಾಗದ ಉಪನ್ಯಾಸಕ ಡಾ.ಮಣಿಕಂಠ ನಿರೂಪಿಸಿದರು. ಡಾ.ಅಯ್ಯಾಳಿ ಯರಿಸ್ವಾಮಿ ಸ್ವಾಗತಿಸಿದರು. ಅಮರೇಶ ವಂದಿಸಿದರು.

ಈ ಸಂದರ್ಭದಲ್ಲಿ ಕನ್ನಡ ವಿಭಾಗದ ಸಹಾಯಕ ಪ್ರಾಧ್ಯಾಪಕರಾದ ಡಾ.ಮುಮ್ತಾಜ್ ಬೇಗಂ, ಡಾ.ಚನ್ನಬಸಪ್ಪ ಕುಂಬಾರ, ರವಿ, ಅರ್ಥಶಾಸ್ತ್ರ ವಿಭಾಗದ ಡಾ.ಜೆ.ಕೃಷ್ಣ, ರವಿ.ಎ.ಎನ್, ಇತಿಹಾಸ ವಿಭಾಗದ ಡಾ.ಇಬ್ರಾಹಿಂ ಸಾಬ, ಭೌತಶಾಸ್ತ್ರ ವಿಭಾಗದ ಡಾ.ಅಣ್ಣೋಜಿ ರೆಡ್ಡಿ.ಆರ್, ದೈಹಿಕ ಶಿಕ್ಷಣ ವಿಭಾಗದ ಡಾ.ಅನಿಲ್‌ಕುಮಾರ್ ಎಡ್ವರ್ಡ್, ದೈಹಿಕ ಮತ್ತು ಸಾಂಸ್ಕೃತಿಕ ನಿರ್ದೇಶಕರಾದ ಶೋಭಾ ಕೆ.ಎಸ್., ರಾಜ್ಯಶಾಸ್ತ್ರ ವಿಭಾಗದ ಬಾರಿಕಾರ ಫಣಿರಾಜ, ಐಕ್ಯೂಎಸಿ ಸಂಚಾಲಕ ಮಂಜುನಾಥ.ಕೆ.ಎಚ್., ಗಣಕ ವಿಜ್ಞಾನ ವಿಭಾಗದ ರವಿಕುಮಾರ, ನಿರ್ವಹಣಾಶಾಸ್ತ್ರ ವಿಭಾಗದ ಅಶ್ರಫ್ ಅಳ್ಳಳ್ಳಿ, ಅನಿತಾ ಕೆ.ಎಂ., ಅನಿಲ್‌ಕುಮಾರ.ಎ., ವಾಣಿಜ್ಯಶಾಸ್ತ್ರ ವಿಭಾಗದ ಅಕ್ಕಿ ಮಾರುತಿ, ಮೆಹತಾಬ್ ಅಂಜುಮ್, ರಸಾಯನಶಾಸ್ತ್ರ ವಿಭಾಗದ ಡಾ.ಏಟಕೂರಿ ದೊರಬಾಬು, ಮಲ್ಲಿಕಾರ್ಜುನ, ಸುಮಲತಾ.ಎಸ್, ಪ್ರಾಣಿಶಾಸ್ತ್ರ ವಿಭಾಗದ ಸಲೀಂ, ಭೂಮಿಕಾ.ಎ., ಗಣಿತಶಾಸ್ತ್ರ ವಿಭಾಗದ ಡಾ.ಅಶೋಕ.ಕೆ., ಸಸ್ಯಶಾಸ್ತ್ರ ವಿಭಾಗದ ನಯನ.ಎಸ್., ಪತ್ರಿಕೋದ್ಯಮ ವಿಭಾಗದ ಉಪನ್ಯಾಸಕ ಬಸವರಾಜ ಕರುಗಲ್, ಪತ್ರಾಂಕಿತ ವ್ಯವಸ್ಥಾಪಕರಾದ ರಾಘಮ್ಮ ಸಿ., ಪ್ರಥಮ ದರ್ಜೆ ಸಹಾಯಕರಾದ ಪ್ರತಿಭಾ ಮುದಗಲ್, ಅಧೀಕ್ಷಕರಾದ ಶಾಮೀದ್, ಗಣಕಯಂತ್ರ ನಿರ್ವಾಹಕ ವೀರೇಶ ಹಾಗೂ ಇತರೆ ಬೋಧಕ–ಬೋಧಕೇತರ ಸಿಬ್ಬಂದಿ ಮತ್ತು ವಿವಿಧ ವಿಭಾಗಗಳ ವಿದ್ಯಾರ್ಥಿಗಳು ಇದ್ದರು.

# ವಿಶ್ವ ಕ್ಷಯರೋಗ ನಿಯಂತ್ರಣ ಕಾರ್ಯಕ್ರಮ



**ಕುಕನೂರು :** ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕೊಪ್ಪಳ ಹಾಗೂ ಜಿಲ್ಲಾ ಕ್ಷಯ ರೋಗ ನಿಯಂತ್ರಣ ಘಟಕ ಕೊಪ್ಪಳ ಮತ್ತು ಸಮುದಾಯ ಆರೋಗ್ಯ ಕೇಂದ್ರ ಕುಕನೂರ ಇವರುಗಳ ಸಹಯೋಗದಲ್ಲಿ ವಿಶ್ವ ಕ್ಷಯ ರೋಗ ನಿಯಂತ್ರಣ ದಿನಾಚರಣೆ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮದಲ್ಲಿ ಆಡಳಿತ ವೈದ್ಯಾಧಿಕಾರಿ ಡಾ. ರಾಮಕೃಷ್ಣ ರೆಡ್ಡಿ ಮಾತನಾಡಿ ಕ್ಷಯ ರೋಗ ಮತ್ತು ಲಕ್ಷಣಗಳು ಕುರಿತು ಮಾಹಿತಿ ನೀಡಿದರು.

ಕಾರ್ಯಕ್ರಮದಲ್ಲಿ ಚಿಕ್ಕ ಮಕ್ಕಳ ತಜ್ಞರಾದ ಡಾ. ಮಂಜುನಾಥ ವಕ್ಕಳದ ,ಎಚ್‌ಓ ಕಾಳಪ್ಪ ಕುಂಬಾರ, ಸಿಎಚ್‌ಓ ಶ್ರೀಮತಿ ಶಿಲ್ಪಾ, ಕುಮಾರಿ ಶಶಿಕಲಾ, ಪಿಎಚಸಿಓ ಶೋಭಾ ಗಜಕೋಶ, ಜಯಶ್ರೀ ಕೋಟಾಗಿ, ಸರಸ್ವತಿ ನಡುಕಟ್ಟಿನ, ಶ್ವೇತಾ ವನಹಳ್ಳಿ , ಆಪ್ತ ಸಮಾಲೋಚಕರಾದ ಕಳಕಪ್ಪ ಬಂಡಿ , ಸೇರಿದಂತೆ ಆಶಾ ಕಾರ್ಯಕರ್ತೆಯರು, ಸಾರ್ವಜನಿಕರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ–1 : 326 ವಿದ್ಯಾರ್ಥಿಗಳು ಗೈರು

ವಿಜಯನಗರ (ಹೊಸಪೇಟೆ): ಜಿಲ್ಲೆಯಲ್ಲಿನ 73 ಪರೀಕ್ಷಾ ಕೇಂದ್ರಗಳಲ್ಲಿ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆ–1 ನಡೆಯುತ್ತಿದ್ದು ಬುಧವಾರ ನಡೆದ ಇಂಗ್ಲೀಷ್ ವಿಷಯ ಪರೀಕ್ಷೆಗೆ 326 ವಿದ್ಯಾರ್ಥಿಗಳು ಗೈರಾಗಿದ್ದಾರೆ. ಇಂಗ್ಲೀಷ್ ವಿಷಯ ಪರೀಕ್ಷೆಗೆ 20,024 ವಿದ್ಯಾರ್ಥಿಗಳು ನೋಂದಾಯಿಸಿಕೊಂಡಿದ್ದು, ಈ ಪೈಕಿ 19,698 ವಿದ್ಯಾರ್ಥಿಗಳು ಪರೀಕ್ಷೆಗೆ ಹಾಜರಾಗಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಿದೆ.

# ಛಲವಾದಿ ಸಮಾಜ ಜಾಗೃತಗೊಳ್ಳಬೇಕು : ಆರ್.ರುದ್ರಯ್ಯ

**ಬೆಳಗಾವಿ ವಾರ್ತೆ**

**ಕೊಪ್ಪಳ :** ಛಲವಾದಿ ಸಮಾಜ ವಧು–ವರರ ಸಮ್ಮೇಳನವು ಕೇವಲ ಮದುವೆ ಸಂಬಂಧಗಳಿಗಾಗಿ ಮಾತ್ರವಲ್ಲ, ಸಮಾಜದ ಒಗ್ಗಟ್ಟಿನ ಮತ್ತು ಪ್ರಗತಿಯ ಪ್ರಮುಖ ವೇದಿಕೆಯಾಗಬೇಕು,ಇಂತಹ ಸಮ್ಮೇಳನಗಳಲ್ಲಿ ಛಲವಾದಿ ಸಮಾಜ ಜಾಗೃತಗೊಳ್ಳುವುದು ಬಹಳ ಮುಖ್ಯ ಎಂದು ನೀರಾವರಿ ಇಲಾಖೆಯ ನಿವೃತ್ತ ಪ್ರಧಾನ ಕಾರ್ಯದರ್ಶಿ ಆರ್.ರುದ್ರಯ್ಯ ಹೇಳಿದರು.

ಅವರು ನಗರದ ಪಾನಗಂಟೆ ಕಲ್ಯಾಣ ಮಂಟಪದಲ್ಲಿ ಛಲವಾದಿ ವಧು ವರರ ಸಮ್ಮೇಳನದ ಕಾರ್ಯಕ್ರಮದಲ್ಲಿ ಜ್ಯೋತಿ ಬೆಳಗಿಸಿ ಮಾತನಾಡಿ ಶಿಕ್ಷಣದ ಮಹತ್ವವನ್ನು ಅರಿತು ಮಕ್ಕಳಿಗೆ ಉತ್ತಮ ವಿದ್ಯಾಭ್ಯಾಸ ಒದಗಿಸುವುದು

ಸಾಮಾಜಿಕ ಏಕತೆ ಮತ್ತು ಪರಸ್ಪರ ಸಹಕಾರವನ್ನು ಬೆಳೆಸುವುದು

ಉದ್ಯೋಗ, ಸ್ವ ಉದ್ಯಮ ಮತ್ತು ಆರ್ಥಿಕ ಸ್ವಾವಲಂಬನೆ ಕಡೆ ಗಮನ ಹರಿಸುವುದು

ಯುವಜನತೆಗೆ ಸರಿಯಾದ ದಾರಿ ತೋರಿಸುವುದು ಈ ರೀತಿಯ ಸಮ್ಮೇಳನಗಳನ್ನು ಸಮಾಜದ ಅಭಿವೃದ್ಧಿಗೆ ದಿಕ್ಕು ತೋರಿಸುವ ಶಕ್ತಿಯುತ ವೇದಿಕೆಗಳಾಗಬಹುದು



ಎಲ್ಲರೂ ಒಂದಾಗಿ ಚಿಂತನೆ ಮಾಡಿ ಕಾರ್ಯಪ್ರವೃತ್ತರಾದರೆ ಛಲವಾದಿ ಸಮಾಜವು ಇನ್ನಷ್ಟು ಮುಂದುವರೆಯಬಹುದು ಎಂದರು.

ತಂದೆ ತಾಯಿಗಳು ಆಸ್ತಿ ಅಂತಸ್ತು ಎಂದು ನೋಡಿಕೊಂಡು ಕುಳಿತುಕೊಳ್ಳದೆ ಸರಳ ಉತ್ತಮ ವ್ಯಕ್ತಿತ್ವವನ್ನು ಯಾವುದೇ ವೃತ್ತಿ ಮಾಡುವರಿಗೆ ಕನ್ಯಾ ವರವನ್ನು ಕೊಟ್ಟು ಸಂಬಂಧ ಬೆಳೆಸಿ ಎಂದು ಹೇಳಿದರು. ಸಮ್ಮೇಳನದ ಉದ್ಘಾಟನೆಯನ್ನು ಅರವಿಂದ ಗಟ್ಟಿಯವರು ನೆರವೇರಿಸಿದರು, ಡಾ.ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆಯನ್ನು ಕೆಜಿಎಫ್ ಮಾಜಿ ಶಾಸಕ ವೈ. ಸಂಪಂಗಿ ನೆರವೇರಿಸಿದರು. ಸಮ್ಮೇಳನದ ಅಧ್ಯಕ್ಷತೆಯನ್ನು ಗವಿಸಿದ್ದಪ್ಪ ಬೆಲ್ಲದ ವಹಿಸಿಕೊಂಡಿದ್ದರು.

ಈ ಸಂದರ್ಭದಲ್ಲಿ ವೇದಿಕೆ ಮೇಲೆ ಚಲವಾದಿ ಮಹಾಸಭಾದ ಜಿಲ್ಲಾಧ್ಯಕ್ಷ ಸಿದ್ದಣ್ಣ ಮ್ಯಾಗೇರಿ, ಮಾಜಿ ನಗರಸಭೆ ರಾಧ ಕನಕಮೂರ್ತಿ ಚಲವಾದಿ, ಪಟ್ಟಣ ಪಂಚಾಯತಿ ಸದಸ್ಯರಾದ ಸರಸ್ವತಿ ಇಟ್ಟಂಗಿ,ಚಲವಾದಿ ಚಿಂತಕರ ವೇದಿಕೆಯ ಜಿಲ್ಲಾಧ್ಯಕ್ಷರಾದ ಸೋಮಣ್ಣ ಚಲವಾದಿ, ಚಲವಾದಿ ಸಮಾಜದ ಮುಖಂಡರಾದ ಕೃಷ್ಣ ಇಟ್ಟಂಗಿ, ಕನಕ ಮೂರ್ತಿ ಚಲವಾದಿ, ಸಣ್ಣ ಕನಕಪ್ಪ ಚಲವಾದಿ, ಛತ್ರಪ್ಪ ಚಲವಾದಿ, ಅನಿಲ್ ಕುಮಾರ್ ಬ್ಯಾಗರ್, ನಿಂಗಪ್ಪ ಕಾಳೆ, ಹನುಮಂತಪ್ಪ ಚಲವಾದಿ, ರಾಘು ಚಲವಾದಿ, ಕಾಶಪ್ಪ ಚಲವಾದಿ, ಸುರೇಶ್ ಬಳಗಾನೂರು, ಶ್ರೀಧರ್ ಬನ್ನಿಕೊಪ್ಪ, ಮಂಜು ದೊಡ್ಡಮನಿ, ಮಾರ್ಕಂಡಪ್ಪ ಬೆಲ್ಲದ, ಲಕ್ಷ್ಮಣ ಕಾಳೆ. ಚಲವಾದಿ ಸಮಾಜದ ಪ್ರಮುಖರು ಉಪಸ್ಥಿತರಿದ್ದರು.

# ಕಾಸರಗೋಡು ಕನ್ನಡ ಗ್ರಾಮ ಕಾಸರಗೋಡು ಗೋ– ಕುಟೀರದ ಎರಡನೇ ಹಂತದ ಕಾಮಗಾರಿಗೆ ಚಾಲನೆ ; ಗೋ – ಮೇವು ಸಂಗ್ರಹಣಾಲಯ– ಮೇಲ್ಚಾವಣಿ



**ಬೆಳಗಾವಿ ವಾರ್ತೆ**

**ಕಾಸರಗೋಡು:** ಕರಾವಳಿ ಸಾಂಸ್ಕೃತಿಕ ಪ್ರತಿಷ್ಠಾನ (ರಿ.), ಕಾಸರಗೋಡು ಇದರ 36ನೇ ಸಂಸ್ಥಾಪನಾ ವರ್ಷಾಚರಣೆಯ ಪ್ರಯುಕ್ತ ಕಾಸರಗೋಡು ಕನ್ನಡ ಗ್ರಾಮದಲ್ಲಿ ನಿರ್ಮಾಣಗೊಳ್ಳುತ್ತಿರುವ ' ಕಾಸರಗೋಡು ಗೋ– ಕುಟೀರ' ದ ಕಾಮಗಾರಿಯು ಮತ್ತೊಂದು ಮಹತ್ವದ ಹಂತಕ್ಕೆ ಕಾಲಿಟ್ಟಿರುತ್ತದೆ. ಕಳೆದ ನವಂಬರ್ 4 , 2025 ರಂದು ಶಿವರಾಮ ಕಾಸರಗೋಡು ಅವರ 60 ನೇ ಜನ್ಮ ವರ್ಷಾಚರಣೆಯನ್ನು ಗೋ – ಸೇವೆಯ ಮೂಲಕ ಗುರುತಿಸಿಕೊಳ್ಳುವುದಕ್ಕಾಗಿ ಕಾಸರಗೋಡು ಗೋ– ಕುಟೀರವನ್ನು ಎಡನೀರು ಮಠದ ಶ್ರೀ ಶ್ರೀ ಸಚ್ಚಿದಾನಂದ ಭಾರತಿ ಶ್ರೀಪಾದಂಗಳವರು ಭೂಮಿ ಪೂಜೆ ನೆರವೇರಿಸಿ ಕಾಮಗಾರಿಗೆ ಚಾಲನೆ ನೀಡಿದ್ದರು. ಇದರ ಮೊದಲ ಹಂತದ ಕಾಮಗಾರಿ ಈಗಾಗಲೇ ಪೂರ್ಣಗೊಂಡಿದೆ. ಇದೀಗ ಎರಡನೇ ಹಂತವಾಗಿ ಮೊದಲ ಅಂತಸ್ತಿನ ಗೋ – ಮೇವು ಸಂಗ್ರಹಣಾಲಯ ಹಾಗೂ ಮೇಲ್ಚಾವಣಿ ನಿರ್ಮಾಣ ಕಾಮಗಾರಿಗೆ ಇದೇ ಮಾರ್ಚ್ 24, 2026 ರಂದು ಬೆಳಗಿನ ಶುಭ ಮುಹೂರ್ತದಲ್ಲಿ ಗೋ– ಧಾರ್ಮಿಕ ಪೂಜಾ ಕಾರ್ಯಕ್ರಮದೊಂದಿಗೆ ಚಾಲನೆ ನೀಡಲಾಯಿತು. ಈ ಕಾರ್ಯಕ್ರಮವು ಗುರು ಹಿರಿಯರ ಆಶೀರ್ವಾದದೊಂದಿಗೆ ನಡೆಯಿತು. ಕಾಸರ ಗೋಡಿನ ಧಾರ್ಮಿಕ ಮುಂದಾಳು ಡಾ.ಕೆ ಎನ್ ವೆಂಕಟ್ರಮಣ ಹೊಳ್ಳ ದೀಪ ಬೆಳಗಿಸಿ ಚಾಲನೆ ನೀಡಿದರು. ಕರಾವಳಿ ಸಾಂಸ್ಕೃತಿಕ ಪ್ರತಿಷ್ಠಾ ನದ ಅಧ್ಯಕ್ಷ ಶಿವರಾಮ ಕಾಸರಗೋಡು ಅಧ್ಯಕ್ಷತೆ ವಹಿಸಿದ್ದರು. ಕಾರ್ಯಕ್ರಮದಲ್ಲಿ ಕಾಂಟ್ರಾಕ್ಟರ್ ಕಿರಣ ಕುಮಾರ್ ಬಿ .ಕೆ ,ರಾಜೇಶ್ ಕುಮಾರ್ ಕೆ.ಬೀರಂತ ಬೈಲ್, ದೀಕ್ಷಿತ್ ಆಚಾರ್ಯ, ದೀಪಕ್ ಚಂದ್ರ ಕೆ, ಪ್ರಸಾದ್ ಕೇಳು ಗುಡ್ಡೆ, ಜಗದೀಶ್ ಕೇಳು ಗುಡ್ಡೆ, ಅಶೋಕ, ಕಿಶೋರ್ ಕುಮಾರ್, ಕುಶಲ ಕುಮಾರ್, ರಾಧಾ ಕಾಸರಗೋಡು, ಸವಿತಾ ಕಿಶೋ ರ್, ಕಾವ್ಯ ಕುಶಲ, ಕೃಪಾನಿಧಿ, ಅನುಷಾ ,ಉಪಸ್ಥಿತರಿದ್ದರು.

ಕಾಸರ ಗೋಡು ಪ್ರದೇಶದಲ್ಲಿ ಗೋವುಗಳನ್ನು ಗೋ– ಭಕ್ತಿಯಿಂದ ಆರಾಧಿಸಿಕೊಂಡು ಬರುತ್ತಿರುವ ನೂರಾರು ಗೋ– ಭಕ್ತರ ಧಾರ್ಮಿಕ ಶ್ರದ್ಧಾ ಕೇಂದ್ರವನ್ನಾಗಿ ರೂಪು ಗೊಳಿಸುವುದಕ್ಕಾಗಿ ಸಾರ್ವಜನಿಕರು ಹಾಗೂ ಗೋ– ಪೋಷಕರ ಸಹಕಾರ ಪ್ರೋತ್ಸಾಹ ಪ್ರಾಯೋಜಕ ತ್ವದಡಿಯಲ್ಲಿ ಸುಮಾರು 25 ಲಕ್ಷ ರೂಪಾಯಿ ವೆಚ್ಚದಲ್ಲಿ ಕಾಸರಗೋಡು ಗೋ– ಕುಟೀರದ ನಿರ್ಮಾಣ ಕಾಮಗಾರಿಯು ಭರದಿಂದ ನಡೆಯುತ್ತಿದೆ. ಊರಿನ ಧಾರ್ಮಿಕ ಪೂಜಾ ಕಾರ್ಯಕ್ರಮಗಳಿಗೆ ಗೋಮೂತ್ರ, ಪಂಚಗವ್ಯ ಮತ್ತುಸಗಣಿ –ಗೋಮಯುವನ್ನು, ಅವಶ್ಯಕತೆ ಇರುವವರಿಗೆ ದಿನನಿತ್ಯ ದೊರಕುವಂತೆ ಮಾಡಲು ಸಿದ್ಧತೆ ಮಾಡಲಾಗುತ್ತಿದೆ. ಕಾಸರಗೋಡು ಗೋ– ಕುಟೀರದ ಗೋವುಗಳನ್ನು ದತ್ತು ಪಡೆದು ಒಂದು ವರ್ಷ ಕಾಲ ಗೋ– ಗ್ರಾಸ ,ಗೋ– ಆಹಾರವನ್ನು ನೀಡಿ ಪೋಷಿಸಲು,ಗೋ ಭಕ್ತರಿಗೆ ಗೋ ಸೇವೆ ಮಾಡಲು ಅವಕಾಶ ನೀಡಲು ಉದ್ದೇಶಿಸಲಾಗಿದೆ.

# 2,000 ರೂ. ಜಮಾ ಆಗದ ಗೃಹಲಕ್ಷ್ಮೀ ಫಲಾನುಭವಿಗಳು NPCI ಲಿಂಕ್ ಮಾಡಿಸಲು ವಿನಂತಿ: ಅಶೋಕ ಮಂದಾಲಿ



**ಬೆಳಗಾವಿ ವಾರ್ತೆ**

**ಗದಗ:** 2,000 ರೂ. ಜಮಾ ಆಗದ ಗೃಹಲಕ್ಷ್ಮೀ ಫಲಾನುಭವಿಗಳು ಬ್ಯಾಂಕ್, ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಆನ್‌ಲೈನ್ ಸೆಂಟರ್‌ಗಳಲ್ಲಿ ಓಕಅಋ ಲಿಂಕ್ ಮಾಡಿಸಬೇಕು ಎಂದು ಗದಗ ತಾಲೂಕು ಪಂಚ ಗ್ಯಾರಂಟಿ ಯೋ ಜನೆ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಅಶೋಕ ಮಂದಾಲಿ ಮನವಿ ಮಾಡಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಗೃಹಲಕ್ಷ್ಮೀ ಫಲಾನುಭವಿಗಳಿಗೆ 2,000 ರೂ. ಬ್ಯಾಂಕ್ ಖಾತೆಗೆ ಜಮಾ ಆಗದೇ ಇರುವ ಫಲಾನುಭವಿಗಳು ತಮ್ಮ ಪಾಸ್‌ಬುಕ್, ಆಧಾರ್ ಕಾರ್ಡ್, ಪಾನ್ ಕಾರ್ಡ್ ತೆಗೆದುಕೊಂಡು ತಮ್ಮ ಖಾತೆ ಇರುವ ಬ್ಯಾಂಕ್ ಇಲ್ಲವೇ ಕರ್ನಾಟಕ ಒನ್, ಗ್ರಾಮ ಒನ್ ಹಾಗೂ ಆನ್‌ಲೈನ್ ಸೆಂಟರ್‌ಗಳಲ್ಲಿ ಎನ್‌ಸಿಪಿಐ ಲಿಂಕ್ ಮಾಡಿಸಬೇಕು.

ಮಾಹಿತಿಗಾಗಿ ಮುಳಗುಂದ ನಾಕಾ ಬಳಿಯ ಕೆಎಸ್‌ಆರ್‌ಟಿಸಿ ಡಿಪೋ ಎದುರಿಗಿನ ಉಪವಿಭಾಗೀಯ ಕಚೇರಿ ಆವರಣದಲ್ಲಿರುವ ಗದಗ ತಾಲೂಕು ಪಂಚ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಕಚೇರಿಗೆ ಕಚೇರಿ ಅವಧಿಯಲ್ಲಿ ಭೇಟಿ ನೀಡಬಹುದಾಗಿದೆ.




**ಬೆಳಗಾವಿ ವಾರ್ತೆ**

**ಗೋಕಾಕ:** ಅಮೆರಿಕ, ಇಸ್ರೇಲ್ ಹಾಗೂ ಇರಾನ್ ದೇಶದ ನಡುವೆ ನಡೆಯುತ್ತಿರುವ ಸಂಘರ್ಷ ದ ಹಿನ್ನೆಲೆ ಗೋಕಾಕ ನಗರ ಹಾಗೂ ಹೊರ ವಲಯದಲ್ಲಿ ಪೆಟ್ರೋಲ್ ಬಂಕ್ ಗಳಲ್ಲಿ ನಗರದ ಕೆಲವಡೆ ಬಂಕ್ ನಲ್ಲಿ ಪೆಟ್ರೋಲ್ ಇರುವದರಿಂದ ಬಂಕ್ ಗೆ ಪೆಟ್ರೋಲ್ ಗಾಗಿ ಸವಾರರು ಮುಗಿಬಿದ್ದಿದ್ದಾರೆ. ಮುಖ್ಯವಾಗಿ ಕೆಲವರು ದೂರದ ಊರುಗಳಿಗೆ ತೆರಳಬೇಕಾದ ವಾಹನಗಳ ಸವಾರರು ಸರತಿ ಸಾಲಿನಲ್ಲಿ ನಿಂತು ಸುಸ್ತಾಗಿ ಹೋಗುವಂತಾ ಪರಿಸ್ಥಿತಿ ಎದುರಾಗಿದೆ.ಪ್ರೆಟ್ರೋಲ್ ಖಾಲಿಯಾಗಿ ಪೆಟ್ರೋಲ್ ದೊರೆಯದ ಹಿನ್ನೆಲೆಯಲ್ಲಿ ಬಂಕ್ ಗಳ ಮುಂದೆ ವಾಹನ ಸವಾರರು ಸಾಲು ಸಾಲಾಗಿ ನಿಂತು ಪ್ರೆಟ್ರೋಲ್ ಸಿಗದೆ ಪರದಾಡುವ ಪರಿಸ್ಥಿತಿ ಎದುರಾಗಿದೆ.

ನಗರದ ಕೆಲವು ಪೆಟ್ರೋಲ್ ಬಂಕ್ ಗಳಲ್ಲಿ ಪ್ರೆಟ್ರೋಲ್ ಸಿಗದೆ ವಾಹನ ಸವಾರರು ಪರಾದಾಡುತ್ತಿದ್ದು, ಕೆಲವು ಬಂಕ್ ಗಳು ಪೆಟ್ರೋಲ್ ಇಲ್ಲದೆ ಬಂದಾಗಿವೆ ಎನ್ನಲಾಗಿದೆ.

# ಶ್ರೀರಾಮನವಮಿ ಹಾಗೂ ಶ್ರೀ ಹನುಮ ಜಯಂತಿ; ಇಂದು ಬೃಹತ್ ಶೋಭಾಯಾತ್ರೆ

**ಬೆಳಗಾವಿ ವಾರ್ತೆ**

**ಗೋಕಾಕ:** ಇಲ್ಲಿನ ವಿಶ್ವ ಹಿಂದೂ ಪರಿಷತ್, ಬಜರಂಗದಳ ಹಾಗೂ ಶ್ರೀ ರಾಮೋತ್ಸವ ಸಮಿತಿಯ ನೇತೃತ್ವದಲ್ಲಿ ಶ್ರೀರಾಮನವಮಿ ಹಾಗೂ ಶ್ರೀ ಹನುಮ ಜಯಂತಿ ಅಂಗವಾಗಿ ಇಂದು ಗುರುವಾರ ದಿನಾಂಕ 26 ರಂದು ಬೃಹತ್ ಶೋಭಾಯಾತ್ರೆ ಹಮ್ಮಿಕೊಳ್ಳಲಾಗಿದೆ ಎಂದು ಶ್ರೀ ರಾಮೋತ್ಸವ ಸಮಿತಿ ಪ್ರಮುಖ ಹಾಗೂ ಹಿಂದೂ ಮುಖಂಡ ಸದಾಶಿವ ಗುದಗಗೋಳ ತಿಳಿಸಿದರು.

ಬುಧವಾರದಂದು ನಗರದಲ್ಲಿ ಕರೆದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, ಶೋಭಾಯಾತ್ರೆಯು ಗುರುವಾರ ಸಾಯಂಕಾಲ 4 ಘಂಟೆಗೆ ನಗರದ ಶ್ರೀ ಕೊಳವಿ ಹಣಮಂತ ದೇವಸ್ಥಾನ ಪ್ರಾರಂಭವಾಗಿ ಸಂಗೋಳ್ಳಿ ರಾಯಣ್ಣ ವೃತ್ತದ ಮುಕ್ತಾಯಗೊಳ್ಳಲ್ಲಿದ್ದು, ಶೋಭಾಯಾತ್ರೆಗೆ ನಗರದ ಶೂನ್ಯ ಸಂಪಾದನ ಮಠದ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು, ಗೋಕಾಕ ಮತ್ತು ಮೂಡಲಗಿ ತಾಲೂಕಿನ ವಿವಿಧ ಶ್ರೀಗಳು ಚಾಲನೆ ನೀಡಲಿದ್ದಾರೆ.

ಶೋಭಾಯಾತ್ರೆ ಮಾರ್ಗ ಮಧ್ಯೆ ಸಮಿತಿ ವತಿಯಿಂದ ಅಲ್ಲಲ್ಲಿ ಪ್ರಸಾದ ಹಾಗೂ ಅಲ್ಪೋಹಾರ ವ್ಯವಸ್ಥೆ ಮಾಡಲಾಗಿದ್ದು, ಸಂಗೋಳ್ಳಿ ರಾಯಣ್ಣ ವೃತ್ತದಲ್ಲಿ ಮಹಾಪ್ರಸಾದ ವ್ಯವಸ್ಥೆ ಮಾಡಲಾಗಿದೆ. ಶೋಭಾಯಾತ್ರೆಯಲ್ಲಿ ಡಿಜೆ ಸೌಂಡ್‌ಗೆ ಅವಕಾಶ ನೀಡದೇ ದೇಶದ ಹೆಸರಾಂತ್ಯ ವಿವಿಧ 13 ಜಾನಪದ ಕಲಾ ತಂಡಗಳು ಹಾಗೂ ಹಲವಾರು ರೂಪಕಗಳು ಭಾಗವಹಿಸಲಿವೆ. ಶಾಲಾ ವಿದ್ಯಾರ್ಥಿಗಳು, ಚಿಕ್ಕ ಮಕ್ಕಳು ಶ್ರೀರಾಮ, ಹನುಮಂತ ಸೇರಿದಂತೆ ವಿವಿಧ ಮಹಾ ಪುರುಷರ ವೇಷಭೂಷಣದಲ್ಲಿ ಪಾಲ್ಗೊಂಡು ಕಾರ್ಯಕ್ರಮವನ್ನು ಯಶ್ವಸಿಗೊಳ್ಳಿಸಲಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ಹಿಂದೂ ಬಾಂಧವರು ಈ ಶೋಭಾ ಯಾತ್ರೆಯಲ್ಲಿ ಪಾಲ್ಗೊಂಡು ಶೋಭಾಯಾತ್ರೆಯನ್ನು ಯಶಸ್ವಿ ಮಾಡಬೇಕು ಎಂದು ಮನವಿ ಮಾಡಿದರು.



ಈ ಸಂದರ್ಭದಲ್ಲಿ ವಿಶ್ವ ಹಿಂದೂ ಪರಿಷತ್ತಿನ ವಿಧಿ ಪ್ರಕೋಷ್ಟ, ಜಿಲ್ಲಾ ಪ್ರಮುಖ ಹಾಗೂ ನ್ಯಾಯವಾದಿ ಬಲದೇವ ಸಣ್ಣಕ್ಕಿ, ನ್ಯಾಯವಾದಿ ವಿಠ್ಠಲ ಡಬ್ಬನವರ ಇದ್ದರು.

# ಡಾ. ರಾಮಮನೋಹರ ಲೋಹಿಯಾ ತತ್ವ ಸಿದ್ಧಾಂತ ಇಂದಿಗೂ ಪ್ರಸ್ತುತ




**ಬೆಳಗಾವಿ ವಾರ್ತೆ**

**ವಿಜಯಪುರ:** ಸಮಾಜವಾದ, ಮಾರ್ಕ್ಸವಾದದ ಲೋಹಿಯಾ ಅವರ ಚಿಂತನೆಗಳು ಸತ್ಯ, ನಿಷ್ಠೆ, ತತ್ವ ಸಿದ್ಧಾಂತಗಳು ಇಂದಿಗೂ ಪ್ರಸ್ತುತವಾಗಿವೆ ಎಂದು ಸಾಹಿತಿ ಕುಲಸಚಿವರು ಸೋಮಲಿಂಗ ಗೆಣ್ಣೂರ ಹೇಳಿದರು.

ಪ್ರಾ. ಎ.ಎಸ್. ಹಿಪ್ಪರಗಿ ಪ್ರತಿಷ್ಠಾನ ವಿಜಯಪುರ ಹಾಗೂ ಚಾಣಕ್ಯ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯ ಸಹಯೋಗದೊಂದಿಗೆ ಮಹಾವಿದ್ಯಾಲಯದ ಸಭಾಭವನದಲ್ಲಿ ಸೋಮವಾರ ಜರುಗಿದ ಡಾ. ರಾಮಮನೋಹರ ಲೋಹಿಯಾ ಅವರ 116ನೇ ಜನ್ಮ ದಿನಾಚರಣೆ ಅಂಗವಾಗಿ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಲೋಹಿಯಾ ಅವರ ಚಿಂತನೆ ಕುರಿತು ಮಾತನಾಡಿದರು.

ಲೋಹಿಯಾ ಚಿಕ್ಕವರಿದ್ದಾಗ ಮಹಾತ್ಮಾ ಗಾಂಧೀಜಿ ಅವರ ಜೊತೆ ಅಸಹಕಾರ ಚಳುವಳಿ, ಉಪ್ಪಿನ ಸತ್ಯಾಗ್ರಹದಲ್ಲಿ ಪಾಲ್ಗೊಂಡು ದೇಶಾಭಿಮಾನ ಸಮಾನತೆಗಾಗಿ ಹೋರಾಟ ಮಾಡುತ್ತ ಸಮಾಜವಾದದ ತತ್ವ ಸಿದ್ಧಾಂತವನ್ನು ಪ್ರಪಂಚಕ್ಕೆ ಪರಿಚಯಿಸುತ್ತ ಜಗತ್ತು ಒಂದೇ ಆಗಬೇಕು. ಬದುಕನ್ನು ಸಾಗಿಸಬೇಕು ಎಂದು ಹೇಳುತ್ತಿದ್ದರು. ಲೋಹಿಯಾ ಅವರ ತತ್ವ ಸಿದ್ಧಾಂತಗಳು ಇಂದಿಗೂ ಪ್ರಸ್ತುತವಾಗಿವೆ ಎಂದರು.

ಕರ್ನಾಟಕ ರಾಜ್ಯ ಅಕ್ಕಮಹಾದೇವಿ ಮಹಿಳಾ ವಿಶ್ವವಿದ್ಯಾಲಯದ ಕುಲಪತಿಗಳಾದ ಪ್ರೊ. ಶ್ರೀಮತಿ ವಿಜಯಾ ಕೋರಿಶೆಟ್ಟಿ ಮಾತನಾಡುತ್ತ ಡಾ. ರಾಮಮನೋಹರ ಲೋಹಿಯಾ ಅವರು ಒಬ್ಬ ಶ್ರೇಷ್ಠ ಸಮಾಜ ಸುಧಾರಕರು ಜನರ ಪ್ರೀತಿ, ವಿಶ್ವಾಸ ಗಳಿಸಿದ ಉತ್ತಮ ವ್ಯಕ್ತಿ. ಅವರ ತತ್ವ ಸಿದ್ಧಾಂತಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು.

ಬಳ್ಳಾರಿಯ ಲೋಹಿಯಾ ಪ್ರಕಾಶನದ ಸಿ. ಚನ್ನಬಸವಣ್ಣ ಮಾತನಾಡಿದರು. ಇದೇ ಸಂದರ್ಭದಲ್ಲಿ ಅಂತರರಾಷ್ಟ್ರೀಯ ಮಹಿಳಾ ದಿನಾಚರಣೆ ದಿನದಂದು ಕರ್ನಾಟಕ ಭೂಷಣ ರಾಷ್ಟ್ರೀಯ ಪ್ರಶಸ್ತಿ ಪಡೆದ ವಿದ್ಯಾವತಿ ಅಂಕಲಗಿ ಅವರನ್ನು, ಉಡುಪಿ ಕಾಂತಾವಾರ ಕನ್ನಡ ಸಂಘದಿಂದ ದತ್ತಿ ಪ್ರಶಸ್ತಿ ಪಡೆದ ಸಿ. ಚನ್ನಬಸವಣ್ಣ, ಕುಲಪತಿಗಳಾದ ಪ್ರೊ. ವಿಜಯಾ ಕೋರಿಶೆಟ್ಟಿ, ಕುಲಸಚಿವರಾದ ಸೋಮಲಿಂಗ ಗೆಣ್ಣೂರ ಅವರನ್ನು ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎಸ್.ಟಿ. ಮೇರವಾಡಿ ಅವರನ್ನು ಪ್ರತಿಷ್ಠಾನದ ಪದಾಧಿಕಾರಿಗಳು ಸನ್ಮಾನಿಸಿದರು.

ಪ್ರತಿಷ್ಠಾನದ ಅಧ್ಯಕ್ಷ ಡಾ. ವಿ.ಡಿ. ಐಹೊಳ್ಳಿ ಸ್ವಾಗತಿಸಿದರು. ಕಾರ್ಯದರ್ಶಿ ಎಸ್.ಎನ್. ಶಿವಣಗಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಾಚಾರ್ಯ ಡಾ. ಎಸ್.ಟಿ. ಮೇರವಾಡೆ ವಂದಿಸಿದರು. ಸಾಹಿತಿ ಸಂಗಮೇಶ ಬದಾಮಿ ನಿರೂಪಿಸಿದರು.

ಕಾರ್ಯಕ್ರಮದಲ್ಲಿ ಎಸ್.ಬಿ.ದೊಡಮನಿ, ವಿ.ಬಿ. ಸಾಲಕ್ಕಿ, ವಿ.ಸಿ. ನಾಗಠಾಣ, ಸಹದೇವ ನಾಡಗೌಡರ, ಮ.ನು. ಪತ್ತಾರ, ಮ.ಗು. ಯಾದವಾಡ, ನ್ಯಾಯವಾದಿ ಕೆ.ಎಫ್. ಅಂಕಲಗಿ, ಶಕುಂತಲಾ ದೊಡಮನಿ, ಭಾಗ್ಯಶ್ರೀ ಕೋಟಿ, ಶಿಕ್ಷಕಿ ಹುಡೇದ, ಸತ್ಯಾನಂದ ಪಾತ್ರೋಟ, ಬಸವರಾಜ ಯಂಕಂಚಿ, ಅನಿಲ ಹೊಸಮನಿ, ಅಶೋಕ ಹಿಪ್ಪರಗಿ ಮಹಾವಿದ್ಯಾಲಯದ ಸಿಬ್ಬಂದಿ ವರ್ಗ ವಿದ್ಯಾರ್ಥಿ–ವಿದ್ಯಾರ್ಥಿನಿಯರು ಪಾಲ್ಗೊಂಡಿದ್ದರು. ಕಾರ್ಯಕ್ರಮ ತುಂಬಾ ಯಶಸ್ವಿಯಾಯಿತು.

# ಕ್ರೀಡೆಯಿಂದ ಶಿಸ್ತು, ನಾಯಕತ್ವ ಗುಣ ಅಭಿವೃದ್ಧಿ: ಡಾ.ರವೀಂದ್ರ ಮದ್ರಕಿ

**ಬೆಳಗಾವಿ ವಾರ್ತೆ**

**ವಿಜಯಪುರ:** ಕ್ರೀಡೆಗಳು ವಿದ್ಯಾರ್ಥಿಗಳ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಅತ್ಯಂತ ಮುಖ್ಯ ಎಂದು ಯಶೋಧಾ ಆಸ್ಪತ್ರೆಯ ಮುಖ್ಯಸ್ಥರಾದ ಡಾ.ರವೀಂದ್ರ ಮದ್ರಕಿ ಹೇಳಿದರು.

ಯಶೋಧಾ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್‌ಗಳ ವತಿಯಿಂದ ಆಯೋಜಿಸಲಾದ ಯಶೋಧಾ ಚೈತ್ರೋತ್ಸವ–2026 ಕ್ರೀಡೋತ್ಸವದ ಉದ್ಘಾಟನಾ ಸಮಾರಂಭದ ಮುಖ್ಯ ಅತಿಥಿಗಳಾಗಿ ಮಾತನಾಡಿದ ಅವರು, ನಿಯಮಿತವಾಗಿ ಕ್ರೀಡೆಗಳಲ್ಲಿ ಭಾಗವಹಿಸುವುದರಿಂದ ಶಿಸ್ತು, ಸಹಕಾರ ಮತ್ತು ನಾಯಕತ್ವ ಗುಣಗಳನ್ನು ಅಭಿವೃದ್ಧಿಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಗೌರವ ಅತಿಥಿಯಾದ ಡಾ.ಕಮಲಾ ಮದ್ರಕಿ ಮಾತನಾಡಿ, ವಿದ್ಯಾರ್ಥಿಗಳು ಪಾಠಗಳ ಜೊತೆಗೆ ಕ್ರೀಡೆಗಳಲ್ಲಿಯೂ ತೊಡಗಿಸಿಕೊಂಡು ಸಮಗ್ರ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ನಿವೃತ್ತ ದೈಹಿಕ ಶಿಕ್ಷಣ ನಿರ್ದೇಶಕರಾದ ಡಾ.ಅಶೋಕಕುಮಾರ ರಾ.ಜಾಧವ ಮಾತನಾಡಿ, ಕ್ರೀಡೆಗಳು ಆರೋಗ್ಯಕರ ಜೀವನಕ್ಕೆ ಮಾರ್ಗದರ್ಶಕವಾಗಿದ್ದು, ಪ್ರತಿಯೊಬ್ಬ ವಿದ್ಯಾರ್ಥಿಯೂ ಕ್ರೀಡೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಆಡಳಿತಾಧಿಕಾರಿ ಪ್ರೊ.ರಮೇಶ್ ಚೌಧರಿ, ಪ್ರಾಂಶುಪಾಲರಾದ ಪ್ರೊ.ಗುರುಶಾಂತ್.ಪಿ ಹಾಗೂ ನಸಿರ್‌ಂಗ್ ಸಲಹೆಗಾರರಾದ ವೈ.ವೈ.ಕಡಗಬಾವಿ, ವಿಜಯಕುಮಾರ ಚವ್ಹಾಣ, ಚಾಂದವಸೀಮ ಮುಕಾದಮ ಭಾರತ ಸೇವಾದಳದ ಜಿಲ್ಲಾ ಸಂಚಾಲಕರಾದ ನಾಗೇಶ ಡೋಣುರ ಮತ್ತು ಬಂಜಾರ ಶಾಲೆಯ ದೈಹಿಕ ಶಿಕ್ಷಕ ಸೋಮಶೇಖರ ರಾಠೋಡ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು.




ಕಾರ್ಯಕ್ರಮದಲ್ಲಿ ಯಶೋಧಾ ಗ್ರೂಪ್ ಆಫ್ ಇನ್‌ಸ್ಟಿಟ್ಯೂಷನ್‌ಗಳ ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕ್ರೀಡೋತ್ಸವಕ್ಕೆ ಉತ್ಸಾಹ ತುಂಬಿದರು.

# ಜಿಲ್ಲಾಡಳಿತದಿಂದ ಡಾ.ಬಾಬು ಜಗಜೀವನರಾಂ ಹಾಗೂ ಡಾ. ಅಂಬೇಡ್ಕರ ಜಯಂತಿ ಆಚರಣೆಗೆ ನಿರ್ಧಾರ




**ಬೆಳಗಾವಿ ವಾರ್ತೆ**

**ವಿಜಯಪುರ:** ಜಿಲ್ಲಾಡಳಿತದ ವತಿಯಿಂದ ಬರುವ ಏಪ್ರಿಲ್ 5ರಂದು ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಂ ಹಾಗೂ ಏಪ್ರಿಲ್ 14 ರಂದು ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರ ಅವರ ಜಯಂತ್ಯೋತ್ಸವ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ ಹಾಗೂ ಸಂಭ್ರಮದಿಂದ ಆಚರಿಸಲು ನಿರ್ಧರಿಸಲಾಯಿತು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಮಂಗಳವಾರ ನಡೆದ ಪೂರ್ವ ಸಿದ್ಧತಾ ಸಭೆಯ ಜಿಲ್ಲಾಧಿಕಾರಿಗಳಾದ ಡಾ.ಆನಂದ ಕೆ ಅವರ ಅಧ್ಯಕ್ಷತೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಯಿತು.

ಬರುವ ಏಪ್ರಿಲ್ 5 ರಂದು ಡಾ. ಬಾಬು ಜಗಜೀವನರಾಂ ಅವರ 119ನೇ ಜಯಂತ್ಯೋತ್ಸವ ಕಾರ್ಯಕ್ರಮದ ಅಂಗವಾಗಿ ನಗರದ ಸೆಟ್‌ಲೈಟ್ ಬಸ್ ನಿಲ್ದಾಣದ ಹತ್ತಿರ ಇರುವ ಡಾ. ಬಾಬು ಜಗಜೀವನರಾಂ ಪ್ರತಿಮೆಗೆ ಮಾಲಾರ್ಪಣೆ ಮಾಡುವ ಮೂಲಕ ಬೆಳಿಗ್ಗೆ 8 ಗಂಟೆಗೆ ವಿವಿಧ ಕಲಾತಂಡಗಳೊಂದಿಗೆ ಡಾ. ಬಾಬು ಜಗಜೀವನರಾಂ ಅವರ ಭಾವಚಿತ್ರದ ಮೆರವಣಿಗೆ ಜರುಗಲಿದೆ. ನಗರದ ವಿವಿಧ ವೃತ್ತಗಳಿಂದ ಸಾಗಿ ಕಂದಗಲ್ಲ ಶ್ರೀ ಹನಮಂತರಾಯ ರಂಗಮಂದಿರದಲ್ಲಿ ಜಯಂತಿ ಅಂಗವಾಗಿ ಸಭಾ ಕಾರ್ಯಕ್ರಮ ಆಯೋಜಿಸಲಾಗುವುದು. ಜಯಂತಿ ಕಾರ್ಯಕ್ರಮ ಅಂಗವಾಗಿ ಉಪನ್ಯಾಸಕ ರಿಂದ ಡಾ. ಬಾಬು ಜಗಜೀವನರಾಂ ಅವರ ಜೀವನ ಚರಿತ್ರೆ ಹಾಗೂ ಸಾಧನೆ ಕುರಿತು ಉಪನ್ಯಾಸ, ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನ ಮಾಡಲು ತೀರ್ಮಾನಿಸಲಾಯಿತು.

ಏಪ್ರಿಲ್ 14 ರಂದು ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರ ಅವರ ಜಯಂತಿ ಅಂಗವಾಗಿ ಅಂದು ಬೆಳಿಗ್ಗೆ 8 ಗಂಟೆಗೆ ನಗರದ ಬುದ್ಧ ವಿಹಾರದಿಂದ ವಿವಿಧ ಕಲಾ ತಂಡಗಳೊಂದಿಗೆ ಡಾ. ಬಿ.ಆರ್ ಅಂಬೇಡ್ಕರ ಅವರ ಭಾವಚಿತ್ರ ಮೆರವಣಿಗೆ ನಡೆಯಲಿದ್ದು, ಕಂದಗಲ್ಲ ಶ್ರೀ ಹನಂತರಾಯ ರಂಗ ಮಂದಿರದಲ್ಲಿ ಸಭಾ ಕಾರ್ಯಕ್ರಮಗಳನ್ನು ಆಯೋಜಿಸಲು ತೀರ್ಮಾನಿಸಲಾಯಿತು. ಜಯಂತಿ ಕಾರ್ಯಕ್ರಮದಲ್ಲಿ ನುರಿತ ಉಪನ್ಯಾಸಕರೋರ್ವರಿಂದ ಉಪನ್ಯಾಸ ಏರ್ಪಡಿಸುವುದು ಹಾಗೂ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಸನ್ಮಾನಿಸಲು ನಿರ್ಧರಿಸಲಾಯಿತು. ವಸತಿ ನಿಲಯದ ವಿದ್ಯಾರ್ಥಿಗಳಿಗೆ ಪ್ರಬಂಧ ಸ್ಪರ್ಧೆ, ರಸಪ್ರಶ್ನೆ ಆಯೋಜಿಸುವಂತೆಯೂ, ಆಯಾ ಜಯಂತಿ ದಿನಗಳಂದು ನಗರದಲ್ಲಿರುವ ವಿವಿಧ ವೃತ್ತಗಳಿಗೆ ದೀಪಾಲಂಕಾರ, ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ, ವೇದಿಕೆ ಅಲಂಕಾರ, ಶಿಷ್ಟಾಚಾರದಂತೆ ಆಮಂತ್ರಣ ಪತ್ರಿಕೆ ಮುದ್ರಣ ಸೇರಿದಂತೆ ಎಲ್ಲಾ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳುವಂತೆಯೂ, ಈ ಮಹನೀಯರ ಜಯಂತಿ ಕಾರ್ಯಕ್ರಮ ಗಳಿಗೆ ಎಲ್ಲ ಇಲಾಖೆಯ ಅಧಿಕಾರಿ,ಸಿಬ್ಬಂದಿಗಳು ಭಾಗವಹಿಸುವಂತೆ ಅವರು ಸೂಚನೆ ನೀಡಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತಿಯ ಮುಖ್ಯಕಾರ್ಯನಿರ್ವಾಹಣಾಧಿಕಾರಿಗಳಾದ ರಿಷಿ ಆನಂದ, ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷಣ ನಿಂಬರಗಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಮಹೇಶ ಪೋತದಾರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು, ವಿವಿಧ ಸಂಘಟನೆ, ಸಂಘ–ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಮುಖಂಡರು ಉಪಸ್ಥಿತರಿದ್ದರು.

BELAGAVI VARTE Kannada Daily morning news paper Editor, Printer, Publisher and Owned by MAHESHWARI BHIMASHI BHARAMANNAVAR, 221/1A/1A/1A MAHALINGESHWAR NAGAR, NEAR BCA HOSTEL BELAGAVI KARNATAKA 591307. Printed at RAJADHANI PRINTING PRESS, CTS NO.1720/B1, SHOP NO.2 KELKARBAG, BELAGAVI, KARNATAKA - 590001